ಜನಮನದ ದನಿ

# ಪ್ರಜೋದಯ

ಸಂಪಾದಕ : ಜೆ.ಆರ್. ಕೆಂಚೇಗೌಡ



ದಕ್ಷಿಣ ಆಫ್ರಿಕಾ ಎದುರಿನ ಟೆಸ್ಟ್ ಸರಣಿ ಸೋಲಿಗೆ ಭಾರತ ತಂಡದ ಹಂಗಾಮಿ ನಾಯಕ ರಿಷಭ್ ಪಂತ್ ಅವರು ಕ್ಷಮೆ ಕೇಳಿದ್ದಾರೆ.

28 ನವೆಂಬರ್ 2025 ಶುಕ್ರವಾರ ಬೆಲೆ ₹ 2.00 ಸಂಪುಟ : 19 ಸಂಚಿಕೆ : 257 | ಪುಟ-4 | ಹಾಸನ | E-mail : prajodayahsn@gmail.com | RNI NO: KARKAN/2007/22629



ಮಾರ್ಕ್ ಹಾಗು 45 ಎದುರು ಪರಭಾಷಾ ಸಿನಿಮಾಗಳ ಆರ್ಭಟ » 2



ಇತಿಹಾಸ ತಿಳಿದಾಗ ಭಾಷೆ, ಸಂಸ್ಕೃತಿಯ ಭವಿಷ್ಯ ಸುರಕ್ಷಿತ » 3



ಬೆಳೆಹಾನಿ ಪರಿಹಾರ ಬಿಡುಗಡೆ ಮಾಡಿದ ಸರ್ಕಾರ » 4

# ತಾರಕಕ್ಕೇರಿದ ಸಿ.ಎಂ. ಗದ್ದುಗೆ ಗುದ್ದಾಟ

- ದೆಹಲಿಯಲ್ಲಿ ಹಿರಿಯ ನಾಯಕರೊಂದಿಗೆ ಚರ್ಚಿಸಿ ನಿರ್ಣಯ: ಮಲ್ಲಿಕಾರ್ಜುನ ಖರ್ಗೆ
- ರಾಜ್ಯದಲ್ಲಿ ಅಹಿಂದ-ಒಕ್ಕಲಿಗ ಬಣ ಬಡಿದಾಟ

• ಪ್ರಜೋದಯ ವರದಿ

**ಬೆಂಗಳೂರು:** ರಾಜ್ಯದಲ್ಲಿ ಮುಖ್ಯಮಂತ್ರಿ ಹುದ್ದೆಗಾಗಿ ರಾಜ್ಯ ಕಾಂಗ್ರೆಸ್‌ನಲ್ಲಿ ಬಣ ಬಡಿದಾಟ ಜೋರಾಗಿದೆ. ಸಿದ್ದರಾಮಯ್ಯ ಹಾಗು ಡಿ.ಕೆ.ಶಿವಕುಮಾರ್ ನಡುವಿನ ಬಿಕ್ಕಟ್ಟು ಶಮನಕ್ಕೆ ಹೈಕಮಾಂಡ್ ಮುಂದಾಗಿದೆ.

ನಾಯಕತ್ವ ಬದಲಾವಣೆ ವಿಚಾರ ತಾರಕಕ್ಕೇರಿರುವ ನಡುವೆ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸೇರಿ ಹಿರಿಯ ನಾಯಕರೊಂದಿಗೆ ನವದೆಹಲಿಯಲ್ಲಿ ಸಭೆ ಕರೆಯುವುದಾಗಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಗುರುವಾರ ಹೇಳಿದ್ದಾರೆ.

ದೆಹಲಿಯ ಇಂದಿರಾ ಕಾಂಗ್ರೆಸ್ ಭವನದಲ್ಲಿ ಹೈಕಮಾಂಡ್ ಸಭೆ ನಿಗದಿಯಾಗಿರುವ ಹಿನ್ನಲೆ ಮಲ್ಲಿಕಾರ್ಜುನ ಖರ್ಗೆ ಅವರು ಬೆಂಗಳೂರಿನಿಂದ ದೆಹಲಿಗೆ ತೆರಳಿದರು. ಈ ವೇಳೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾನು ಎಲ್ಲರನ್ನೂ ಕರೆಸಿ ಚರ್ಚೆ ಮಾತನಾಡುತ್ತೇನೆ. ರಾಹುಲ್ ಗಾಂಧಿ, ಸಿದ್ದರಾಮಯ್ಯ ಹಾಗು ಡಿ.ಕೆ.ಶಿವಕುಮಾರ್ ಇರುತ್ತಾರೆ. ಹೈಕಮಾಂಡ್ ಅಂದರೆ ಏಕಾಂಗಿ ಅಲ್ಲ ಒಂದು ತಂಡ, ಹೈಕಮಾಂಡ್ ಕೂಳಿತು ಚರ್ಚಿಸಿ ನಿರ್ಣಯ ಕೈಗೊಳ್ಳುತ್ತದೆ ಎಂದು ಹೇಳಿದರು.

**ಆಪ್ತರ ಜೊತೆ ಸಿಎಂ ಸಭೆ**

ಈ ನಡುವೆ ರಾಜ್ಯದಲ್ಲಿ ಹೆಚ್ಚುತ್ತಿರುವ ನಾಯಕತ್ವ ಗದ್ದಲದ ಮಧ್ಯೆ, ಸಿದ್ದರಾಮಯ್ಯ ಅವರು ಗುರುವಾರ ತಮ್ಮ ನಿವಾಸದಲ್ಲಿ ಜಿ.ಪರಮೇಶ್ವರ್, ಸತೀಶ್ ಜಾರಕಿಹೊಳಿ, ಹೆಚ್.ಸಿ. ಮಹದೇವಪ್ಪ, ಕೆ.ವೆಂಕಟೇಶ್ ಮತ್ತು ಕೆ.ಎನ್.ರಾಜಣ್ಣ ಸೇರಿ ಹಿರಿಯ ಸಚಿವರು ಮತ್ತು ಆಪ್ತ ನಾಯಕರನ್ನು ಭೇಟಿಯಾಗಿ ಮಾತುಕತೆ ನಡೆಸಿದ್ದು, ತೀವ್ರ ಕುತೂಹಲ ಮೂಡಿಸಿದೆ.

ಈ ಮಧ್ಯೆ ಸಿದ್ದರಾಮಯ್ಯ ಬಣದ ಗೃಹ ಸಚಿವ ಜಿ.ಪರಮೇಶ್ವರ್ ನೇತೃತ್ವದಲ್ಲಿ 6 ಸಚಿವರು ದೆಹಲಿ ದಂಡಯಾತ್ರೆ ಹೋಗಲಿದ್ದಾರೆ. ಹೆಚ್.ಕೆ. ಪಾಟೀಲ್, ಹೆಚ್.ಸಿ. ಮಹದೇವಪ್ಪ, ಸತೀಶ್ ಜಾರಕಿಹೊಳಿ ಮತ್ತು ಇನ್ನಿಬ್ಬರು ಸಚಿವರು ಶುಕ್ರವಾರ ದೆಹಲಿಗೆ ಹೋಗಲು ಸಿದ್ಧತೆ ನಡೆಸಿದ್ದಾರೆ ಎನ್ನಲಾಗಿದೆ.

**ಸಿದ್ದರಾಮಯ್ಯ ಬೆಂಬಲಕ್ಕೆ ನಿಂತ ಅಹಿಂದ**

ಮುಖ್ಯಮಂತ್ರಿ ಬದಲಾವಣೆ ವಿಚಾರ ವ್ಯಾಪಕ ಚರ್ಚೆಗೆ ಗ್ರಾಸವಾಗಿರುವಂತೆಯೇ ಇತ್ತ ಸಿದ್ದರಾಮಯ್ಯ ಅವರನ್ನು ಕೆಳಗಿಳಿಸಿದರೆ ಕಾಂಗ್ರೆಸ್ ಪಕ್ಷಕ್ಕೆ ದೊಡ್ಡ ಅಪಾಯ ಕಟ್ಟಿಟ್ಟ ಬುತ್ತಿ ಎಂದು ಕಾಂಗ್ರೆಸ್‌ಗೆ ಅಹಿಂದ ಸಮುದಾಯಗಳು ಎಚ್ಚರಿಕೆ ನೀಡಿವೆ.

ಕರ್ನಾಟಕ ರಾಜ್ಯ ಹಿಂದುಳಿದ ವರ್ಗ ಸಮುದಾಯಗಳ ಒಕ್ಕೂಟ ಅಧ್ಯಕ್ಷ ಕೆ.ಎಂ.ರಾಮಚಂದ್ರಪ್ಪ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಸಿದ್ದರಾಮಯ್ಯ ಅವರನ್ನು ಮುಖ್ಯಮಂತ್ರಿ ಸ್ಥಾನದಿಂದ ಕಳೆಗಿಳಿಸಿದರೆ ಅಹಿಂದ ವರ್ಗ ಸುಮ್ಮನಿರುವುದಿಲ್ಲ. ಮಠಾಧೀಶರು ಮತ್ತು ಒಕ್ಕಲಿಗ ಸಂಘ ಆಂದೋಲನ ನಡೆಸಲು ಸಿದ್ಧರಿದ್ದರೆ, ನಾವು ನಮ್ಮ ನಾಯಕನನ್ನು ಬಿಡುವುದಿಲ್ಲ. ಅಹಿಂದ ಸಮು ದಾಯಗಳ ಶೇ.70 ರಷ್ಟು ಜನ ಸಂಖ್ಯೆಯು ಈ ಸರ್ಕಾರಕ್ಕೆ ಬೆಂಬಲ ನೀಡಿತ್ತು. ಅಹಿಂದ ಸಮುದಾಯದ ನಾಯಕನನ್ನು ಕೆಳಗಿಳಿಸುವ ಪ್ರಯತ್ನ ಗಳನ್ನು ನಾವು ಸಹಿಸುವುದಿಲ್ಲವೆಂದರು.

**ಡಿ.ಕೆ.ಶಿ.ಗೆ ಅನ್ಯಾಯವಾದರೆ ಹೋರಾಟ**

ಡಿ.ಕೆ.ಶಿವಕುಮಾರ್‌ಗೆ ಅನ್ಯಾಯವಾದರೆ ರಾಜ್ಯಾದ್ಯಂತ ಉಗ್ರ ಹೋರಾಟ ನಡೆಸುವುದಾಗಿ ಕರ್ನಾಟಕ ರಾಜ್ಯ ಒಕ್ಕಲಿಗರ ಸಂಘ ಗುರುವಾರ ಕಾಂಗ್ರೆಸ್ ಹೈಕಮಾಂಡ್‌ಗೆ ಎಚ್ಚರಿಕೆ ನೀಡಿದೆ.

ವಿಧಾನಸಭೆ ಚುನಾವಣೆಯ ಸಮಯದಲ್ಲಿ ಶಿವಕುಮಾರ್ ಅವರು ಸಾಕಷ್ಟು ಶ್ರಮಿಸಿದ್ದು, ರಾಜ್ಯಾದ್ಯಂತ ಪ್ರವಾಸ ಮಾಡಿ ಪಕ್ಷ ಸಂಘಟನೆ ಮಾಡಿದ್ದಾರೆ ಮತ್ತು ಅವರ ಪ್ರಯತ್ನದಿಂದಾಗಿ ಕಾಂಗ್ರೆಸ್ 140 ಸ್ಥಾನಗಳನ್ನು ಗಳಿಸಿತು. ಕಾಂಗ್ರೆಸ್ ಹೈಕಮಾಂಡ್, ಡಿ.ಕೆ.ಶಿವಕುಮಾರ್ ಅವರ ಶ್ರಮಕ್ಕೆ ಕನಿಷ್ಠ ಕೂಲಿ (ಪ್ರತಿಫಲ) ನೀಡಬೇಕೆಂದು ನಾವು ವಿನಂತಿಸುತ್ತೇವೆಂದು ಸಂಘದ ಅಧ್ಯಕ್ಷ ಎಲ್.ಶ್ರೀನಿವಾಸ್ ಅವರು ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.




### ಸಿಎಂ-ಡಿಸಿಎಂ ಪೋಸ್ಟ್ ವಾರ್

ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಕುರ್ಚಿ ಕಾಳಗ ಈಗ ಪೋಸ್ಟ್ ವಾರ್ ತನಕ ತಲುಪಿದೆ.

ಕೊಟ್ಟ ಮಾತು ಉಳಿಸಿಕೊಳ್ಳುವುದೇ ಜಗತ್ತಿನ ಶಕ್ತಿ. ನ್ಯಾಯಾಧೀಶರಾಗಲಿ, ರಾಷ್ಟ್ರಪತಿಯಾಗಲಿ, ನಾನಾಗಲಿ, ಕೊಟ್ಟ ಮಾತಿಗೆ ತಕ್ಕಂತೆ ನಡೆಯಬೇಕೆಂದು ಬುಧವಾರ ಡಿ.ಕೆ.ಶಿವಕುಮಾರ್ ಅವರು ಪೋಸ್ಟ್ ಹಾಕುವ ಮೂಲಕ ಸಿದ್ದರಾಮಯ್ಯ ಅವರಿಗೆ ಟಾಂಗ್ ನೀಡಿದ್ದರು.

ತಿರುಗೇಟು ನೀಡಿರುವ ಸಿದ್ದರಾಮಯ್ಯ ಅವರು, ರಾಜ್ಯದ ಜನರಿಗೆ ನಾವು ಕೊಟ್ಟ ಮಾತು ಕೇವಲ ಘೋಷಣೆ ಅಲ್ಲ, ಮಾತೇ ನಮಗೆ ಜಗತ್ತು ಎಂದು ತಮ್ಮ ಎಕ್ಸ್ ಖಾತೆಯಲ್ಲಿ ಪೋಸ್ಟ್ ಮಾಡುವ ಮೂಲಕ ಡಿ.ಕೆ.ಶಿವಕುಮಾರ್‌ಗೆ ತಿರುಗೇಟು ನೀಡಿದ್ದಾರೆ.

## ಇಂದು ಉಡುಪಿ ಕೃಷ್ಣ ಮಠಕ್ಕೆ ಪ್ರಧಾನಿ ನರೇಂದ್ರ ಮೋದಿ ಭೇಟಿ

• ಪ್ರಜೋದಯ ವರದಿ

**ಉಡುಪಿ:** ಪ್ರಧಾನಿ ನರೇಂದ್ರ ಮೋದಿ ಅವರು ನ. 28ರ ಶುಕ್ರವಾರ ಉಡುಪಿಯ ಶ್ರೀಕೃಷ್ಣ ಮಠಕ್ಕೆ ಭೇಟಿ ನೀಡಲಿದ್ದಾರೆ.

ಮಧ್ಯಾಹ್ನ 12 ಗಂಟೆಗೆ ಪ್ರಧಾನಿ ಕೃಷ್ಣಮಠಕ್ಕೆ ಬರಲಿದ್ದು, ಮೊದಲು ಕನಕದಾಸ ಪುತ್ಥಳಿಗೆ ಪುಷ್ಪಾರ್ಚನೆ ಮಾಡುವರು. ಬಳಿಕ ಕನಕನ ಕಿಂಡಿಗೆ ಹೊದಿಸಿರುವ ಚಿನ್ನದ ಕವಚ, ಸುವರ್ಣ ತೀರ್ಥ ಮಂಟಪವನ್ನು ಅನಾವರಣಗೊಳಿಸುವರು. ಶ್ರೀಕೃಷ್ಣ, ಮುಖ್ಯಪ್ರಾಣ ದೇವರ ಹಾಗು ಸುವರ್ಣ ಪಾದುಕೆಯ ದರ್ಶನ ಮಾಡಲಿದ್ದಾರೆ. ಬಳಿಕ ಅವರಿಗೆ ಪ್ರಸಾದ ನೀಡಲಾಗುವುದೆಂದು ಪುತ್ತಿಗೆ ಮಠಾಧೀಶ ಸುಗುಣೇಂದ್ರ ತೀರ್ಥ ಸ್ವಾಮೀಜಿ ತಿಳಿಸಿದ್ದಾರೆ.

ಪೂರ್ಣಕುಂಭ ಸ್ವಾಗತದೊಂದಿಗೆ ಪ್ರಧಾನಿಯವರನ್ನು ಬರಮಾಡಿಕೊಳ್ಳಲಾಗುವುದು. ಸರ್ವಜ್ಞ ಪೀಠ, ಗೋಶಾಲೆ ದರ್ಶನ ಮಾಡಿದ ಬಳಿಕ ಅವರು ಗೀತಾಮಂದಿರಕ್ಕೆ ಭೇಟಿ ನೀಡುವರು. ಅಲ್ಲಿ ಲಘು ಉಪಾಹಾರ ಸೇವಿಸುವರು. ಬಳಿಕ ಸಭಾ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಲಕ್ಷ ಕಂಠ ಗೀತಾ ಕಾರ್ಯಕ್ರಮದ ಅಂಗವಾಗಿ ಭಗವದ್ಗೀತೆಯ 18ನೇ ಅಧ್ಯಾಯದ ಕೊನೆಯ ಕೆಲವು ಶ್ಲೋಕಗಳನ್ನು ಪಠಿಸುವರು. ಶ್ಲೋಕಗಳ ಪಾರಾಯಣದ ಬಳಿಕ ಪರ್ಯಾಯ ಪುತ್ತಿಗೆ ಮಠದ ವತಿಯಿಂದ ಮೋದಿ ಅವರಿಗೆ ಗೌರವ ಸಮರ್ಪಣೆ ನಡೆಯಲಿದೆ. ಮೋದಿಯವರು ಕೋಟಿ ಗೀತಾ ಲೇಖನ ಯಜ್ಞದ ದೀಕ್ಷೆಯನ್ನೂ ಪಡೆಯುವರು. ಕೇಂದ್ರ ಸಚಿವ ಪ್ರಲ್ಹಾದ ಜೋಶಿ, ರಾಜ್ಯಪಾಲ ಥಾವರ್‌ಚಂದ್ ಗೆಹಲೋತ್, ಸಚಿವ ಬೈರತಿ ಸುರೇಶ್ ಅವರೂ ಪಾಲ್ಗೊಳ್ಳುವರು. ಧರ್ಮಸ್ಥಳದ ಧರ್ಮಾಧಿಕಾರಿ ಡಾ. ಡಿ. ವೀರೇಂದ್ರ ಹೆಗ್ಗಡೆ ಅವರು ಸ್ವಾಗತ ಭಾಷಣ ಮಾಡುವರು. ಅಷ್ಟ ಮಠದ ಸ್ವಾಮೀಜಿಗಳಿಗೆ ಆಹ್ವಾನ ನೀಡಿದ್ದೇವೆಂದು ಹೇಳಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಭೇಟಿ ಹಿನ್ನಲೆಯಲ್ಲಿ ಬೆಳಿಗ್ಗೆ 8 ರಿಂದ ಮಧ್ಯಾಹ್ನ 3ರ ವರೆಗೆ ಶ್ರೀ ಕೃಷ್ಣ ಮಠಕ್ಕೆ ಸಾರ್ವಜನಿಕರಿಗೆ ಪ್ರವೇಶ ನಿರ್ಬಂಧಿಸಲಾಗಿದೆಯೆಂದು ಪುತ್ತಿಗೆ ಶ್ರೀ ತಿಳಿಸಿದರು.



## ಜಿಲ್ಲೆಯಲ್ಲಿ ಕೈಗಾರಿಕಾ ಕಾರಿಡಾರ್ ಸ್ಥಾಪನೆ ಪ್ರಸ್ತಾಪ

### ಕೇಂದ್ರ ಸಚಿವರ ನಡೆಗೆ ಶಾಸಕ ಹೆಚ್.ಪಿ.ಸ್ವರೂಪ್ ಸ್ವಾಗತ

• ಪ್ರಜೋದಯ ವರದಿ

**ಹಾಸನ :** ಜಿಲ್ಲೆ ಸೇರಿ ರಾಜ್ಯದ 9 ಪ್ರಮುಖ ಜಿಲ್ಲೆಗಳಲ್ಲಿ ರಾಷ್ಟ್ರೀಯ ಕೈಗಾರಿಕಾ ಕಾರಿಡಾರ್ ಅಭಿವೃದ್ಧಿಗೆ ಕೇಂದ್ರ ಸರ್ಕಾರ ಒಲವು ತೋರಿರುವುದಕ್ಕೆ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಹಾಗು ಪಿಯೂಷ್ ಗೋಯೆಲ್ ಅವರಿಗೆ ಶಾಸಕ ಹೆಚ್.ಪಿ.ಸ್ವರೂಪ್ ಅವರು ಧನ್ಯವಾದ ತಿಳಿಸಿದ್ದಾರೆ.

ನಮ್ಮ ಜಿಲ್ಲೆಯವರಾದ ಕೇಂದ್ರ ಬೃಹತ್ ಕೈಗಾರಿಕೆ ಮತ್ತು ಉಕ್ಕು ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರು, ಕರ್ನಾಟಕದ 9 ಜಿಲ್ಲೆಗಳನ್ನೊಳಗೊಂಡ ರಾಷ್ಟ್ರೀಯ ಕೈಗಾರಿಕಾ ಕಾರಿಡಾರ್ ಅಭಿವೃದ್ಧಿ ಕಾರ್ಯಕ್ರಮ ಅನುಷ್ಠಾನ ಸಂಬಂಧ ನ.13 ರಂದು ಪಿಯೂಷ್ ಗೋಯೆಲ್ ಅವರನ್ನು ಭೇಟಿ ಮಾಡಿ, ಲಿಖಿತ ಪ್ರಸ್ತಾವನೆ ಸಲ್ಲಿಸಿ ಮನವಿ ಮಾಡಿದ್ದರು. ಅದಕ್ಕೆ ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವರಾದ ಗೋಯೆಲ್ ಅವರು ಸ್ಪಂದಿಸಿರುವುದು, ಕರ್ನಾಟಕದ ಪ್ರಾದೇಶಿಕ ಸಮತೋಲಿತ ಕೈಗಾರಿಕಾ ಅಭಿವೃದ್ಧಿಗೆ ಇದು ಪೂರಕವಾಗಿದೆ. ಇಂತಹ ಆಕಾಂಕ್ಷೆಗಳನ್ನು ಈಡೇರಿಸುವ ರಚನಾತ್ಮಕ ಕೇಂದ್ರದ ನೀತಿಯನ್ನು ಕಾರ್ಯ ರೂಪಕ್ಕೆ ತರುವಲ್ಲಿ ಈ ಕ್ರಮ ಒಂದು ಪ್ರಮುಖ ಆರಂಭಿಕ ಹೆಜ್ಜೆ ಎಂದು ಹೇಳಿರುವುದು ಸಂತೋಷ ತಂದಿದೆ ಎಂದಿದ್ದಾರೆ.



ಕೇಂದ್ರ ಪೂರಕ ನಡೆಯನ್ನು ಸ್ವಾಗತಿಸಿರುವ ಅವರು, ಕೈಗಾರಿಕೆ ಹಾಗು ಸಾಗಣೆ ಕ್ಷೇತ್ರಗಳಿಗೆ ಪರಿವರ್ತನಾತ್ಮಕ ಕಾಯಕಲ್ಪ ನೀಡುವ ಸುವಿಶಾಲವಾದ ರಾಷ್ಟ್ರೀಯ ಕೈಗಾರಿಕಾ ಕಾರಿಡಾರ್ ಅಭಿವೃದ್ಧಿ ಕಾರ್ಯಕ್ರಮ ಜಾರಿಯಿಂದ ಹಾಸನ ಮಾತ್ರವಲ್ಲದೆ, ಮಂಡ್ಯ, ಮೈಸೂರು, ಚಾಮರಾಜನಗರ, ಕೋಲಾರ, ಮಂಗಳೂರು, ಹುಬ್ಬಳ್ಳಿ-ಧಾರವಾಡ, ರಾಯಚೂರು, ಬೀದರ್ ಜಿಲ್ಲೆಗಳಿಗೂ ಅನುಕೂಲವಾಗಲಿದೆ. ಉದ್ದೇಶಿತ ಯೋಜನೆ ಅನುಷ್ಠಾನಕ್ಕೆ ಬಂದರೆ ಕರ್ನಾಟಕದಲ್ಲಿ ಸರಕು, ಕೈಗಾರಿಕೆ ಉತ್ಪನ್ನಗಳ ಸಾಗಣೆ ಸುಲಭವಾಗಿ ಕೈಗಾರಿಕಾಭಿವೃದ್ಧಿ ವೇಗ ಗತಿಯಲ್ಲಿ ಸಾಗುತ್ತದೆ ಎಂದಿದ್ದಾರೆ.

ತಮಗೆ ಸಿಕ್ಕ ಅತ್ಯಲ್ಪ ಅಧಿಕಾರಾವಧಿಯಲ್ಲಿ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರು, ಮಾಜಿ ಸಚಿವ ಹೆಚ್.ಡಿ.ರೇವಣ್ಣ ಅವರು ಹಾಗು ಹೆಚ್.ಡಿ.ಕುಮಾರಸ್ವಾಮಿ ಹಾಸನ ಜಿಲ್ಲೆಗೆ ಹಾಗೂ ಕರ್ನಾಟಕ ರಾಜ್ಯಕ್ಕೆ ಸಾಕಷ್ಟು ಕೊಡುಗೆ ನೀಡಿದ್ದಾರೆ. ಅದರಲ್ಲೂ ಜಿಲ್ಲೆಯ ಶೈಕ್ಷಣಿಕ, ಆರ್ಥಿಕ,

» ನಾಲ್ಕನೇ ಪುಟದಲ್ಲಿ

## ಇಂದು ಉಸ್ತುವಾರಿ ಸಚಿವರ ಪ್ರವಾಸ

• ಪ್ರಜೋದಯ ವರದಿ

**ಹಾಸನ:** ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ ಅವರು ಶುಕ್ರವಾರ ಜಿಲ್ಲಾ ಪ್ರವಾಸ ಕೈಗೊಂಡಿದ್ದಾರೆ.



ಡಿ.6ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಜಿಲ್ಲೆಗೆ ಭೇಟಿ ನೀಡಿ, ವಿವಿಧ ಅಭಿವೃದ್ಧಿ ಕಾಮಗಾರಿ ಗಳ ಶಂಕುಸ್ಥಾಪನೆ, ಉದ್ಘಾಟನಾ ಕಾರ್ಯಕ್ರಮ ನಡೆಯುವ ಸ್ಥಳ ನಗರದ ಸರ್ಕಾರಿ ಇಂಜಿನೀಯರಿಗ್ ಕಾಲೇಜು ಮೈದಾನವನ್ನು ಬೆಳಿಗ್ಗೆ 11 ಗಂಟೆಗೆ ಸಚಿವ ಕೃಷ್ಣಬೈರೇಗೌಡ ಅವರು ಪರಿಶೀಲನೆ ನಡೆಸುವರು. ಬಳಿಕ ಮಧ್ಯಾಹ್ನ 12 ಗಂಟೆ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಅಧಿಕಾರಿಗಳೊಂದಿಗೆ ಚರ್ಚೆ ನಡೆಸಲಿದ್ದಾರೆ. ಬಳಿಕ ಸಮಯವನ್ನು ಕಾಯ್ದಿರಿಸಲಾಗಿದೆ.

## ಕಾಂಗ್ರೆಸ್‌ನಲ್ಲಿ ಮುಖ್ಯಮಂತ್ರಿ ಕುರ್ಚಿಗಾಗಿ ಕಾದಾಟ

### ಬೆಂಬಲ ಬೆಲೆ ನೀಡಿ ಜೋಳ ಖರೀದಿಸುವ ಬದಲು ಶಾಸಕರ ಖರೀದಿ: ರೇವಣ್ಣ ವ್ಯಂಗ್ಯ

• ಪ್ರಜೋದಯ ವರದಿ

**ಬೇಲೂರು:** ರಾಜ್ಯ ಕಾಂಗ್ರೆಸ್ ಸರ್ಕಾರ ಬಡವರ ಹಿತವನ್ನು ಮರೆತು ಕೇವಲ ಮುಖ್ಯಮಂತ್ರಿ ಕುರ್ಚಿಗಾಗಿ ಕಳೆದ ಎರಡು ವರ್ಷಗಳಿಂದ ಕಾದಾಟ ಮಾಡುತ್ತಾ ಅಭಿವೃದ್ಧಿಗೆ ಒತ್ತು ನೀಡದೆ ರಾಜ್ಯ ಖಜಾನೆಯನ್ನು ಲೂಟಿ ಮಾಡುತ್ತಿದ್ದಾರೆಂದು ಮಾಜಿ ಸಚಿವ ಹೆಚ್.ಡಿ. ರೇವಣ್ಣ ಅವರು ರಾಜ್ಯ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದರು.

ತಾಲ್ಲೂಕಿನ ಹೆಬ್ಬಾಳು ಹಾಲು ಉತ್ಪಾದಕರ ಸಹಕಾರ ಸಂಘದ ಕಟ್ಟಡವನ್ನು ಉದ್ಘಾಟಿಸಿ ಮಾತನಾಡಿದ ಅವರು, ರಾಜ್ಯದಲ್ಲಿ ಗ್ಯಾರಂಟಿ ಆಮಿಷದ ಮೂಲಕ ಅಧಿಕಾರ ಹಿಡಿದ ಕಾಂಗ್ರೆಸ್ ಸರ್ಕಾರ ಯಾವುದೇ ಅಭಿವೃದ್ಧಿ ಕೆಲಸ ಮಾಡುತ್ತಿಲ್ಲ. ಮುಸುಕಿನ ಜೋಳಕ್ಕೆ ಬೆಂಬಲ ಬೆಲೆ ನೀಡಿ ಜೋಳ ಖರೀದಿಸುವ ಬದಲು ಶಾಸಕರನ್ನು ಖರೀದಿಗೆ ಕಾಂಗ್ರೆಸ್ ಸರ್ಕಾರ ಮುಂದಾಗಿದೆ ಎಂದು ವ್ಯಂಗ್ಯವಾಡಿದರು.



ಸರ್ಕಾರ ರೈತರಿಗೆ ಬೆಳೆ ಪರಿಹಾರ ನೀಡುವಲ್ಲಿ ಸಂಪೂರ್ಣ ವಿಫಲವಾಗಿದ್ದಾರೆ. ರೈತರಿಗೆ ಸಿಗುವ ಸಹಾಯ ಧನಕ್ಕೂ ಕತ್ತರಿ ಪ್ರಯೋಗ ಮಾಡಿದ್ದಾರೆ. ಇಂಧನ ಇಲಾಖೆಯಲ್ಲಿ ಭ್ರಷ್ಟಾಚಾರಕ್ಕೆ ಕುಮ್ಮಕ್ಕು ನೀಡುತ್ತಾ ರೈತರಿಂದ ವಸೂಲಿಗೆ ಮುಂದಾಗಿದೆ. ಅಧಿಕಾರದ ಸಂದರ್ಭದಲ್ಲಿ ಅಷ್ಟೋ ಇಷ್ಟೋ ಹಣ ಮಾಡಬೇಕೆಂದು ಹಳ್ಳಿ ಹಳ್ಳಿಗೆ ಬಾರ್ ತೆರಯಲು ಅನುಮತಿ ನೀಡುತ್ತಾ ಗ್ರಾಮಿಣ ಜನರ ನೆಮ್ಮದಿಯನ್ನು ಕಾಂಗ್ರೆಸ್ ಸರ್ಕಾರ ಹಾಳು ಮಾಡುತ್ತಿದೆ ಎಂದು ಕಿಡಿಕಾರಿದರು.

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಬಳಿಕ ಹತ್ತು ಕೆ.ಜಿ. ಅಕ್ಕಿ ನೀಡುವ ಭರವಸೆ ಹುಸಿಯಾಗಿದೆ. ಕೇಂದ್ರ ಸರ್ಕಾರ ನೀಡುವ ಐದು ಕೆ.ಜಿ. ಅಕ್ಕಿ ನೀಡುತ್ತಾ ನಾವೇ ಕೊಡುತ್ತವೆಂದು ಹೇಳವ ಸರ್ಕಾರಕ್ಕೆ ನಾಚಿಕೆ, ಮಾನ ಮರ್ಯಾದೆ ಇಲ್ಲ. ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರ ಮನವಿ ಮೇಲೆ ಹಾಸನ-ಬೇಲೂರು-ಚಿಕ್ಕಮಗಳೂರು ರಾಷ್ಟ್ರೀಯ ಹೆದ್ದಾರಿ ರಸ್ತೆಗೆ ಭೂಸ್ವಾಧೀನ ನಡೆಸಲು ಸರ್ಕಾರದ ಮೀನಾ ಮೇಷ ಎಣಿಸುತ್ತಿದೆ. ರಾಜ್ಯ ಸರ್ಕಾರ ಭಾರೀ ಭ್ರಷ್ಟಾಚಾರ ಮತ್ತು ಲೂಟಿಯಿಂದ ಕರ್ನಾಟಕವನ್ನು ದಿವಾಳಿತನಕ್ಕೆ ಮುಂದಾಗಿದ್ದಾರೆ. ದೇಶದಲ್ಲಿ ಕಾಂಗ್ರೆಸ್ ತನ್ನ ದುಷ್ಟ ನೀತಿಯಿಂದ ಸರ್ವನಾಶವಾಗುತ್ತಿದೆ. ಮುಂದಿನ ದಿನಗಳಲ್ಲಿ ಕರ್ನಾಟಕ ಜನತೆ ಕಾಂಗ್ರೆಸ್ ಪಕ್ಷವನ್ನು ಶಾಶ್ವತವಾಗಿ ಮನೆಗೆ ಕಳಿಸುತ್ತಾರೆಂದು ಭವಿಷ್ಯ ನುಡಿದರು.

ಶಾಸಕ ಹೆಚ್.ಕೆ.ಸುರೇಶ್, ಮಾಜಿ ಶಾಸಕ ಕೆ.ಎಸ್.ಲಿಂಗೇಶ್, ಹಾಸನ ಡಿಸಿಸಿ ಬ್ಯಾಂಕ್ ನಿರ್ದೇಶಕ ಎಂ.ಎ. ನಾಗರಾಜ್, ಹಾಲಿನ ಡೇರಿ ಅಧ್ಯಕ್ಷ ರೇಣುಕಯ್ಯ, ನಿರ್ದೇಶಕ ರಾಮಚಂದ್ರೇಗೌಡ, ಬಿ.ಎಂ.ದೊಡ್ಡವೀರೇಗೌಡ, ಗ್ರಾಮ ಪಂಚಾಯಿತಿ ಅಧ್ಯಕ್ಷೆ ದೃವಕುಮಾರಿ, ವಿಸ್ತರಣಾಧಿಕಾರಿ ಪುಟ್ಟರಾಮು, ಸಹಾಯಕ ವ್ಯವಸ್ಥಾಪಕ ದಿನೇಶ್, ಸುರೇಶ್, ಕಾರ್ಯದರ್ಶಿ ಶಂಕರೇಗೌಡ, ಮಾಜಿ ಅಧ್ಯಕ್ಷ ಶಾಂತಮೂರ್ತಿ ಹಾಜರಿದ್ದರು.

## ಫುಟ್‌ಪಾತ್ ಒತ್ತುವರಿ ತೆರವು ಕಾರ್ಯಾಚರಣೆ

### ಪಾಲಿಕೆ ಅಧಿಕಾರಿಗಳಿಂದ ಪೆಟ್ಟಿಗೆ ಅಂಗಡಿ, ಗೂಡಂಗಡಿ, ಮಾರಾಟ ಮಳಿಗೆ ನೆಲಸಮ

• ಪ್ರಜೋದಯ ವರದಿ

**ಹಾಸನ:** ಮಹಾ ನಗರಪಾಲಿಕೆ ಅಧಿಕಾರಿಗಳು ಗುರುವಾರ ಬೆಳ್ಳಂಬೆಳಿಗ್ಗೆ ಕಾರ್ಯಾಚರಣೆಗೆ ಇಳಿದು, ಫುಟ್‌ಪಾತ್ ಒತ್ತುವರಿಗೆ ತೆರವುಗೊಳಿಸಿದರು.

ನಗರದ ಡೇರಿ ವೃತ್ತದಿಂದ ಬಿ. ಕಾಟೀಹಳ್ಳಿ ವೃತ್ತದವರೆಗಿನ ಪ್ರಮುಖ ಕಡೆಗಳಲ್ಲಿ ಜೆಸಿಬಿ ಯಂತ್ರದ ಮೂಲಕ ರಸ್ತೆ ಬದಿಗಳಲ್ಲಿ ದಶಕಗಳಿಂದ ತಲೆ ಎತ್ತಿ ನಿಂತಿದ್ದ ಪೆಟ್ಟಿಗೆ ಅಂಗಡಿಗಳು,



ತಾತ್ಕಾಲಿಕ ಗೂಡಂಗಡಿಗಳು ಮತ್ತು ಮಾರಾಟ ಮಳಿಗೆಗಳನ್ನು ನೆಲಸಮಗೊಳಿಸಲಾಯಿತು.

ಪಾದಚಾರಿ ರಸ್ತೆ ಒತ್ತುವರಿಯಿಂದ ಸಂಚಾರಕ್ಕೆ ತೊಂದರೆಯಾಗಿದೆ ಎಂದು ಸಾರ್ವಜನಿಕರ ದೂರಿನ ಹಿನ್ನಲೆ ಜಿಲ್ಲಾಧಿಕಾರಿ ಆದೇಶದ ಮೇರೆಗೆ ಪಾಲಿಕೆ ಆಯುಕ್ತ ಕೃಷ್ಣಮೂರ್ತಿ ಹಾಗು ಇಂಜಿನೀಯರ್ ಕೆ.ಆರ್.ಕವಿತಾ ಅವರ ನೇತೃತ್ವದಲ್ಲಿ ತೆರವು ಕಾರ್ಯಾ

» ನಾಲ್ಕನೇ ಪುಟದಲ್ಲಿ

## ವಾಯುಭಾರ ಕುಸಿತ: 2 ದಿನ ಮಳೆ ಸಾಧ್ಯತೆ

• ಪ್ರಜೋದಯ ವರದಿ

ಬೆಂಗಳೂರು: ವಾಯುಭಾರ ಕುಸಿತದಿಂದ ರಾಜ್ಯದಲ್ಲಿ ನ.29 ಹಾಗು 30 ರಂದು ವಿವಿಧೆಡೆ ಮಳೆಯಾಗಲಿದೆ.

ದಕ್ಷಿಣ ಒಳನಾಡಿನ 5 ಜಿಲ್ಲೆಗಳಲ್ಲಿ ನ.29ಕ್ಕೆ ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ. ಶ್ರೀಲಂಕಾ ಕರಾವಳಿಯಲ್ಲಿ ವಾಯುಭಾರ ಕುಸಿತವಾಗಿದೆ. ಈ ಪರಿಣಾಮ ರಾಜ್ಯದ ದಕ್ಷಿಣ ಒಳನಾಡಿನಲ್ಲಿ ಶನಿವಾರ, ಭಾನುವಾರ ಹಗುರವಾಗಿ ಮಳೆಯಾಗಲಿದ್ದು, ಉತ್ತರ ಒಳನಾಡಿನಲ್ಲಿ ಮಳೆಯ ಸೂಚನೆ ಇಲ್ಲ.

## ತಂಗಿ ಆರತಕ್ಷತೆ ದಿನವೇ ಅಣ್ಣನ ಸಾವು

- ವಿದ್ಯುತ್ ಕಂಬಕ್ಕೆ ಬೈಕ್ ಡಿಕ್ಕಿ ಹೊಡೆದು ಇಬ್ಬರು ಸಾವು
- ಮದುವೆ ಮನೆಯಲ್ಲಿ ಸೂತಕದ ಛಾಯೆ

• ಪ್ರಜೋದಯ ವರದಿ

**ಬೇಲೂರು:** ತಂಗಿ ಮದುವೆಯ ಆರತಕ್ಷತೆ ಕಾರ್ಯಕ್ರಮಕ್ಕೆ ಹಾಲು-ಮೊಸರು ತರಲು ಹೋದ ಅಣ್ಣ, ಸಂಬಂಧಿ ಬೈಕ್ ಅಪಘಾತದಲ್ಲಿ ದಾರುಣವಾಗಿ ಸಾವನ್ನಪ್ಪಿರುವ ಘಟನೆ ತಾಲ್ಲೂಕಿನ ಮುತ್ತಗನ್ನೆ ಗ್ರಾಮದ ಬಳಿ ಗುರುವಾರ ಮುಂಜಾನೆ ನಡೆದಿದೆ.

ತಾಲ್ಲೂಕಿನ ಹೊನ್ನೇನಹಳ್ಳಿ ಗ್ರಾಮದ ಲೋಕೇಶ್ (25), ಚಿಕ್ಕಮಗಳೂರು ಜಿಲ್ಲೆ ರಾಮೇನಹಳ್ಳಿ ಗ್ರಾಮದ ಕಿರಣ್ (32) ಮೃತ ದುರ್ದೈವಿಗಳು. ಘಟನೆಯಿಂದಾಗಿ ಮದುವೆ ಸಂಭ್ರಮದಲ್ಲಿ ಮುಳುಗಿದ್ದ ಮನೆಯಲ್ಲಿ ಸೂತಕ ಆವರಿಸಿದೆ.



ಚಿಕ್ಕಮಗಳೂರು ಜಿಲ್ಲೆ ಅಜ್ಜಂಪುರದಲ್ಲಿ ತಂಗಿ ಮದುವೆ ಮುಗಿಸಿ ಬಂದಿದ್ದ ಲೋಕೇಶ್, ಆರತಕ್ಷತೆ ಕಾರ್ಯಕ್ರಮಕ್ಕಾಗಿ ತಯಾರಿ

» ನಾಲ್ಕನೇ ಪುಟದಲ್ಲಿ

## ಪ್ರೀತಿಸುವಂತೆ ಅಪ್ರಾಪ್ತೆಗೆ ಕಿರುಕುಳ: ಆಟೋ ಚಾಲಕನ ಬಂಧನ

• ಪ್ರಜೋದಯ ವರದಿ

**ಬೇಲೂರು:** ಅಪ್ರಾಪ್ತ ಬಾಲಕಿಯ ಬೆನ್ನು ಬಿದ್ದು ಪ್ರೀತಿಸುವಂತೆ ಪ್ರತಿದಿನ ಕಿರುಕುಳ ನೀಡುತ್ತಿದ್ದ ಆಟೋ ಚಾಲಕನನ್ನು ಪೊಲೀಸರು ಬಂಧಿಸಿ, ಪೋಕ್ಸೋ ಕಾಯ್ದೆಯಡಿ ಪ್ರಕರಣ ದಾಖಲಿಸಿ ಜೈಲಿಗೆ ಕಳುಹಿಸಿದ್ದಾರೆ.

ಮನು (27) ಎಂಬಾತ ಶಾಲೆಗೆ ತೆರಳುತ್ತಿದ್ದ ಅಪ್ರಾಪ್ತ ವಿದ್ಯಾರ್ಥಿನಿ ಹಿಂದೆ ಬಿದ್ದು ಪ್ರೀತಿಸುವಂತೆ ವಿದ್ಯಾರ್ಥಿನಿಗೆ ಮಾನಸಿಕ ಹಿಂಸೆ ನೀಡುತ್ತಿದ್ದ. ಪ್ರೀತಿಸಲು ನಿರಾಕರಿಸಿದ್ದಕ್ಕೆ ಅವಾಚ್ಯ ಶಬ್ದಗಳಿಂದ ನಿಂದಿಸಿ ರಸ್ತೆಯಲ್ಲಿ ವಿದ್ಯಾರ್ಥಿನಿಯ ಮೈ-ಕೈ ಮುಟ್ಟಿ ಎಳೆದಾಡಿದ್ದ. ಆಟೋ ಚಾಲಕನ ಕಿರುಕುಳದಿಂದ ಬೇಸತ್ತಿದ್ದ ಅಪ್ರಾಪ್ತ ಬಾಲಕಿ, ತಮ್ಮ ಪೋಷಕರ ಬಳಿ ಅಳಲು ತೋಡಿ ಕೊಂಡಿದ್ದಳು. ಕಡೆಗೆ ಪೊಲೀಸರಿಗೆ ದೂರು ನೀಡಿದ್ದು, ಆಟೋ ಚಾಲಕ ನನ್ನು ಬಂಧಿಸಿದ ಪೊಲೀಸರು ಪೋಕ್ಸೋ ಕಾಯ್ದೆಯಡಿ ಪ್ರಕರಣ ದಾಖಲಿಸಿ ಜೈಲಿಗೆ ಕಳುಹಿಸಿದ್ದಾರೆ. ಪಟ್ಟಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

**ಅಪಾರ ಪ್ರಮಾಣದ ಬೆಳೆ ನಷ್ಟಕ್ಕೆ ಅಲ್ಪ ಪ್ರಮಾಣದ ಪರಿಹಾರ | ಬೆಳೆಗಾರರ ಸಂಘ ಆಕ್ರೋಶ**

## ವಿಮಾ ಕಂಪನಿಗಳ ಕಳ್ಳಾಟ: ಕಾಳು ಮೆಣಸಿಗೆ ಕನಿಷ್ಠ ಪೇಔಟ್

• ಪ್ರಜೋದಯ ವರದಿ

**ಹಾಸನ:** ಪ್ರಧಾನ ಮಂತ್ರಿಯ ಫಸಲ್ ಬೀಮಾ ಯೋಜನೆಯಡಿ ತೋಟಗಾರಿಕಾ ಬೆಳೆಗಳಾದ ಕಾಳು ಮೆಣಸು, ಅಡಿಕೆ ಬೆಳೆಗಳಿಗೆ ಹವಾಮಾನಾಧಾರಿತ ಬೆಳೆ ವಿಮೆಯಲ್ಲಿ ಪ್ರೀಮಿಯಂ ಪಾವತಿಸಿರುವ ಬೆಳೆಗಾರರಿಗೆ ವಿಮಾ ಕಂಪನಿಯು ಅತ್ಯಲ್ಪ ಪ್ರಮಾಣದಲ್ಲಿ ಅವೈಜ್ಞಾನಿಕವಾಗಿ ಪೇಔಟ್ ನೀಡಿ ವಂಚಿಸಲಾಗುತ್ತಿದೆ ಎಂಬ ಆರೋಪ ಜೋರಾಗಿದೆ.

ಹಾಸನ, ಚಿಕ್ಕಮಗಳೂರು, ಕೊಡಗು ಜಿಲ್ಲೆಗಳಲ್ಲಿ ಕಳೆದ ವರ್ಷದ ಅತಿಯಾದ ಗಾಳಿ ಮಳೆಯಿಂದ ಅತಿವೃಷ್ಟಿ ಸಂಭವಿಸಿ ಕಾಳು ಮೆಣಸು, ಅಡಿಕೆ ಬೆಳೆಗಳಲ್ಲಿ ಅಪಾರ ಪ್ರಮಾಣದ ನಷ್ಟ ಸಂಭವಿಸಿದೆ. ಆದರೂ ಕೂಡ ವಿಮಾ ಕಂಪನಿಗಳು ಯಾವ ಮಾನದಂಡವನ್ನಾಧರಿಸಿ ವಿಮೆಯ ಪೇಔಟ್ ನೀಡಿದ್ದಾರೆಂಬುದೇ ಸಂಶಯಕ್ಕೆ ಎಡೆಮಾಡಿದೆ. ಹೀಗಾಗಿ ವಿಮಾ ಕಂಪನಿಗಳ ವಿರುದ್ಧ ಕರ್ನಾಟಕ ಬೆಳೆಗಾರರ ಸಂಘ ಆಕ್ರೋಶ ಹೊರಹಾಕಿದೆ.

ವಿಮೆ ಪ್ರೀಮಿಯಂ ಮೊತ್ತವನ್ನು ಬೆಳೆಗಾರರು ಶೇ.33ರಷ್ಟು ಪಾವತಿಸಬೇಕಿದೆ. ಬಾಕಿ ಮೊತ್ತವನ್ನು ಕೇಂದ್ರ ಸರ್ಕಾರ ಶೇ.33 ಹಾಗು ರಾಜ್ಯ ಸರ್ಕಾರ ಶೇ.33ರಷ್ಟು ಪಾವತಿ ಮಾಡುತ್ತದೆ. ಆದರೆ, ಬೆಳೆ ವಿಮೆ ಪ್ರೀಮಿಯಂ ಕಟ್ಟಿಸಿಕೊಳ್ಳುವ ಕಂಪೆನಿಗಳು ಬೆಳೆಗಾರರಿಗೆ ಸರಿಯಾದ ಮಾಹಿತಿ ನೀಡದೆ, ಮಾನದಂಡದ ಬಗ್ಗೆ ತಿಳಿಸದೆ ನೆಪ ಮಾತ್ರಕ್ಕೆ ಲಕ್ಷ ಲಕ್ಷ ನಷ್ಟ ಹೊಂದಿರುವ ಬೆಳೆಗಾರರಿಗೆ ಬಿಡಿಗಾಸು ನೀಡಿ, ಕೈತೊಳೆದುಕೊಳ್ಳುವ ಕೆಲಸ ಮಾಡಿದೆ.

**ಲೆಕ್ಕಾಚಾರವೇ ಯಕ್ಷಪ್ರಶ್ನೆ**

ಪ್ರಕೃತಿ ವಿಕೋಪದಿಂದ ಉಂಟಾಗುವ ಬೆಳೆ ನಷ್ಟದ ಅಂದಾಜು ಪ್ರಕ್ರಿಯೆ ಹಾಗು ನಷ್ಟಕ್ಕೆ ನೀಡಲಾಗುವ ವಿಮೆ ಯಾವ ಮಾನದಂಡವನ್ನಾಧರಿಸಿ ಲೆಕ್ಕಾಚಾರ ಮಾಡುತ್ತಾರೆಂಬುದೇ ಯಕ್ಷ ಪ್ರಶ್ನೆಯಾಗಿದೆ. ಬ್ಯಾಂಕ್‌ಗಳು ವಿಮೆಯ ಪ್ರೀಮಿಯಂ ಕಟ್ಟಿಸಿಕೊಳ್ಳುವುದನ್ನು ಹೊರತುಪಡಿಸಿ, ವಿಮೆಗೆ ಸಂಬಂಧಿಸಿದಂತೆ ಇನ್ನಿತರೆ ಯಾವುದೇ ಮಾಹಿತಿಗಳು ಅವರ ಬಳಿ ಇರುವುದಿಲ್ಲ. ವಿಮೆಯ ಪ್ರೀಮಿಯಂ ಕಟ್ಟುವಾಗ ವಿಮೆಯ ಕಂಪನಿಯ ಯಾವುದೇ ಸಂಪರ್ಕವು ಬೆಳೆಗಾರರಿಗಿರುವುದಿಲ್ಲ. ಹೀಗಾಗಿ ವಿಮೆಯ ನೀತಿ-ನಿಯಮಗಳು, ಮಾಹಿತಿಯನ್ನು ನೀಡುವಲ್ಲಿ ಬೆಳೆಗಾರರನ್ನು ದೂರವಿಡಲಾಗಿದೆ. ವಿಮಾ ವ್ಯವಸ್ಥೆಯ ಅಸ್ಪಷ್ಟತೆಯಿಂದ ಕೂಡಿದ್ದು ಹೀಗಾಗಿ ಕರ್ನಾಟಕ ಬೆಳೆಗಾರರ ಒಕ್ಕೂಟವು ವಿಮಾ ವ್ಯವಸ್ಥೆ ಹಾಗು ಕಂಪನಿಯ ಬಗ್ಗೆ ತೀವ್ರ ಅಸಮಧಾನ ವ್ಯಕ್ತಪಡಿಸಿದೆ.



**ಮಾನದಂಡಗಳ ಮಾಹಿತಿಗೆ ಆಗ್ರಹ**

ರೈತರು, ಬೆಳೆಗಾರರಿಗೆ ಬೆಳೆ ವಿಮೆ ನಿಗದಿ ಮಾಡುವ ಬಗ್ಗೆ ಸ್ಪಷ್ಟತೆಯ ಅವಶ್ಯಕತೆ ಇದೆ. 2024-25ನೇ ಸಾಲಿನಲ್ಲಿಯೇ ಜಾರಿಗೆ ಬರುವಂತೆ ಸಂಬಂಧಪಟ್ಟ ವಿಮಾ ಕಂಪನಿಯು ಕೂಡಲೇ ಅದನ್ನು ಗಂಭೀರವಾಗಿ ಪರಿಗಣಿಸಿ, ಬೆಳೆಗಾರ ಸಂಘಟನೆಗಳ ಪ್ರತಿನಿಧಿಗಳು, ರೈತರು ಮತ್ತು ತೋಟಗಾರಿಕೆ ಇಲಾಖೆಯ ಅಧಿಕಾರಿಗಳನ್ನೊಳಗೊಂಡ ಸಭೆ ನಡೆಸಿ ವಿಮಾ ವ್ಯವಸ್ಥೆಯಲ್ಲಿನ ನೀತಿ-ನಿಯಮಗಳು ಹಾಗು

### ಸರ್ಕಾರ ಕಟ್ಟುನಿಟ್ಟಿನ ಸೂಚನೆ ನೀಡಲಿ

ಬೆಳೆಗಾರರ ಹಿತ ಕಾಯಲು ರಾಜ್ಯ, ಕೇಂದ್ರ ಸರ್ಕಾರಗಳು ವಿಮೆಯ ಪ್ರೀಮಿಯಂ ಹಣ ಪಾವತಿಸುವಲ್ಲಿ ಪಾಲುದಾರರೂ ಆಗಿರುವುದರಿಂದ ವಿಮಾ ಸಂಸ್ಥೆಗೆ ಕಟ್ಟುನಿಟ್ಟಾದ ಸೂಚನೆ ನೀಡುವುದು ಅತ್ಯಗತ್ಯವಾಗಿದೆ. ಹೀಗಾಗದಿದ್ದಲ್ಲಿ ರೈತ ಬೆಳೆಗಾರರ ಹಿತಾಸಕ್ತಿಯನ್ನು ಕಾಪಾಡಲು ಸರ್ಕಾರದ ಮುತುವರ್ಜಿಯಿಂದ ರೂಪುಗೊಂಡಿರುವ ವಿಮಾ ವ್ಯವಸ್ಥೆಯ ಮೂಲ ಉದ್ದೇಶಕ್ಕೆ ದಕ್ಕೆಯಾದಂತಾಗುತ್ತದೆ. ವಿಮಾ ಕಂಪೆನಿಗಳು ಅಡಿಕೆ ಮತ್ತು ಕಾಳುಮೆಣಸು ಬೆಳೆಗಾರರಿಗೆ ವಿಮಾ ಸೌಲಭ್ಯ ಬಗ್ಗೆ ಸ್ಪಷ್ಟ ಮಾಹಿತಿ ನೀಡಬೇಕು. ಮಾನದಂಡಗಳ ಬಗ್ಗೆ ವಿವರಿಸಬೇಕೆಂಬ ಒತ್ತಾಯ ಕೇಳಿ ಬಂದಿದೆ.

ಪ್ರಕೃತಿ ವಿಕೋಪದಿಂದ ಉಂಟಾಗುವ ನಷ್ಟಕ್ಕೆ ವಿಮೆಯನ್ನು ನೀಡುವಾಗ ಅನುಸರಿಸುವ ಮಾನದಂಡಗಳ ಬಗ್ಗೆ ಮಾಹಿತಿ ನೀಡಬೇಕೆಂದು ಬೆಳೆಗಾರರು ಆಗ್ರಹಿಸಿದ್ದಾರೆ.

> **ಬೆಳೆಗಾರರು, ಕೇಂದ್ರ ಮತ್ತು ರಾಜ್ಯ ಸರ್ಕಾರ ವಿಮಾ ಪ್ರೀಮಿಯಂ ಮೊತ್ತವನ್ನು ಪಾವತಿ ಮಾಡಿದರೂ ವಿಮಾ ಕಂಪೆನಿಗಳು ಸರಿಯಾದ ಮಾನದಂಡ ದಲ್ಲಿ ಪಾಲನೆ ಮಾಡಿ ಬೆಳೆ ನಷ್ಟದ ಪರಿಹಾರ ನೀಡುತ್ತಿಲ್ಲ. ಅಲ್ಪ ಪ್ರಮಾಣದ ಪರಿಹಾರ ನೀಡಿ ವಂಚಿಸಲಾಗುತ್ತಿದೆ. ಈ ಬಗ್ಗೆ ಸರ್ಕಾರ ಕಂಪನಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಬೇಕು.**
> **-ಸುರೇಂದ್ರ, ಕಾಫಿ ಬೆಳೆಗಾರರ ಸಂಘದ ಪ್ರಧಾನ ಕಾರ್ಯದರ್ಶಿ**

ವಿಮೆಯ ಪೇಔಟ್ ನೀಡುವ ಮುನ್ನವೇ ಪ್ರಕೃತಿ ವಿಕೋಪದಿಂದ ಉಂಟಾಗಿರುವ ನಷ್ಟ ಹಾಗು ನೀಡಲಾಗುವ ವಿಮೆಯ ಬಗ್ಗೆ ಸಂಬಂಧಪಟ್ಟ ವಿಮಾ ಕಂಪನಿ ಮಾಹಿತಿ ಒದಗಿಸಿಕೊಡಬೇಕು. ಈ ಕೆಲಸ ಶೀಘ್ರದಲ್ಲೇ ಆಗಬೇಕು. ಇದರ ಬಗ್ಗೆ ಸಂಬಂಧಪಟ್ಟ ತೋಟಗಾರಿಕೆ ಇಲಾಖೆಯು ಕೂಡ ಮುತುವರ್ಜಿ ವಹಿಸಿ ಬೆಳೆಗಾರರಿಗೆ ಸ್ಪಷ್ಟ ಮಾಹಿತಿ ಒದಗಿಸಿಕೊಡುವಲ್ಲಿ ಮುಂದಾಗಬೇಕೆಂದು ಕರ್ನಾಟಕ ಗ್ರೋವರ್ಸ್ ಫೆಡರೇಷನ್ ಆಗ್ರಹಿದೆ.

## ಸೆ.4 ರಂದು ದತ್ತ ಪೀಠಕ್ಕಾಗಿ ಭವ್ಯ ಶೋಭಾ ಯಾತ್ರೆ: ಮುತಾಲಿಕ್

• ಪ್ರಜೋದಯ ವರದಿ

**ಹಾಸನ:** ದುಷ್ಟ ಶಕ್ತಿಗಳ ವಿರುದ್ಧ ಹೋರಾಡಲು ಹಿಂದೂಗಳು ಒಟ್ಟಾಗುವ ಅವಶ್ಯಕತೆ ಹೆಚ್ಚಿದ್ದು, ಆ ಹಿನ್ನಲೆಯಲ್ಲಿ ಶ್ರೀರಾಮಸೇನೆ ಹಾಗು ಭಜರಂಗದಳ ಕಾರ್ಯಕರ್ತರು ಒಟ್ಟಾಗಿ ಸೆ.4 ರಂದು ಚಿಕ್ಕಮಗಳೂರಿನ ದತ್ತ ಪೀಠದಲ್ಲಿ ಕಾರ್ಯಕ್ರಮ ಹಮ್ಮಿಕೊಂಡಿದ್ದೇವೆಂದು ಶ್ರೀರಾಮ ಸೇನೆ ಮುಖಂಡ ಪ್ರಮೋದ್ ಮುತಾಲಿಕ್ ಅವರು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಗುರುವಾರ ಮಾತನಾಡಿದ ಅವರು, ದತ್ತ ಪೀಠವನ್ನು ಹಿಂದೂಗಳಿಗೆ ವಹಿಸಬೇಕೆಂದು ಆಗ್ರಹಿಸಿ ರಾಜ್ಯದ 5 ಸಾವಿರಕ್ಕೂ ಹೆಚ್ಚು ಮಾಲಾಧಾರಿಗಳು ದತ್ತ ಪೀಠಕ್ಕೆ ಆಗಮಿಸಲಿದ್ದಾರೆ. ಭವ್ಯ ಶೋಭಾ ಯಾತ್ರೆ ಹಮ್ಮಿಕೊಂಡಿದ್ದು, ಭಜರಂಗದಳ, ಶ್ರೀರಾಮ ಸೇನೆ ಹಾಗು ವಿಶ್ವ ಹಿಂದು ಪರಿಷತ್ ಕಾರ್ಯಕರ್ತರು ಇದೇ ಮೊದಲ ಬಾರಿಗೆ ಒಟ್ಟಾಗಿ ಭಾಗವಹಿಸುತ್ತಿದ್ದೇವೆಂದರು.

30 ವರ್ಷಗಳಿಂದ ದತ್ತ ಪೀಠದ ಸಮಸ್ಯೆ ಜೀವಂತವಾಗಿದೆ. ರಾಜ್ಯ

» ನಾಲ್ಕನೇ ಪುಟದಲ್ಲಿ

# ಇತಿಹಾಸ ತಿಳಿದಾಗ ಭಾಷೆ, ಸಂಸ್ಕೃತಿಯ ಭವಿಷ್ಯ ಸುರಕ್ಷಿತ

## ಬಾಳ್ಳುಪೇಟೆಯಲ್ಲಿ ಕನ್ನಡ ರಾಜ್ಯೋತ್ಸವದ ನುಡಿ ಹಬ್ಬದಲ್ಲಿ ಶ್ರೀ ಶಿವ ಸಿದ್ದೇಶ್ವರ ಸ್ವಾಮೀಜಿ ಅಭಿಮತ

• ಪ್ರಜೋದಯ ವರದಿ



**ಸಕಲೇಶಪುರ:** ಕನ್ನಡ ಭಾಷೆಯ ಇತಿಹಾಸವನ್ನು ಅರಿಯದೆ ವರ್ತಮಾನವನ್ನು ಅರ್ಥಮಾಡಿಕೊಳ್ಳಲು ಸಾಧ್ಯವಿಲ್ಲ. ಇತಿಹಾಸ ತಿಳಿದಾಗ ಮಾತ್ರ ಭಾಷೆ ಮತ್ತು ಸಂಸ್ಕೃತಿಯ ಭವಿಷ್ಯ ಸುರಕ್ಷಿತವಾಗುತ್ತದೆ ಎಂದು ಸಿದ್ದಗಂಗಾ ಮಠದ ಕಿರಿಯ ಶ್ರೀ ಶಿವ ಸಿದ್ದೇಶ್ವರ ಸ್ವಾಮೀಜಿ ಅಭಿಪ್ರಾಯಪಟ್ಟರು.

ಬಾಳ್ಳುಪೇಟೆಯಲ್ಲಿ ಗುರುವಾರ ಹೊಯ್ಸಳ ಕನ್ನಡ ಸೇನೆಯ ವತಿಯಿಂದ ಕನ್ನಡ ರಾಜ್ಯೋತ್ಸವದ ಅಂಗವಾಗಿ ಆಯೋಜಿಸಲಾಗಿದ್ದ ನುಡಿಹಬ್ಬದಲ್ಲಿ ಮಾತನಾಡಿದ ಅವರು, ಜಾಗತೀಕರಣ ಮತ್ತು ತಂತ್ರಜ್ಞಾನ ಭಾಷೆ- ಸಂಸ್ಕೃತಿಗೆ ಪರಿಣಾಮ ಬೀರುತ್ತಿರುವ ಸಂದರ್ಭದಲ್ಲಿ ನುಡಿ ಹಬ್ಬದಂತಹ ಕಾರ್ಯಕ್ರಮಗಳು ಅತ್ಯಂತ ಮಹತ್ವದ್ದಾಗಿವೆ ಎಂದು ಅವರು ಹೇಳಿದರಲ್ಲದೆ, ಕನ್ನಡ ಪ್ರದೇಶಗಳ ಏಕೀಕರಣ ಚಳವಳಿ ಮತ್ತು ಅದರ ಇತಿಹಾಸವನ್ನು ಪ್ರಸ್ತಾಪಿಸಿದ ಸ್ವಾಮೀಜಿ, ಆಚಾರ್ಯ ವಿನೋಬಾ ಭಾವೇ ಕನ್ನಡವನ್ನು ವಿಶ್ವ ಲಿಪಿಗಳ ರಾಣಿ ಎಂದು ಕೊಂಡಾಡಿರುವುದನ್ನು ನೆನಪಿಸಿದರು.

ಕಾರ್ಯಕ್ರಮದಲ್ಲಿ ಕ.ಸಾ.ಪ ಜಿಲ್ಲಾಧ್ಯಕ್ಷ ಪ್ರೊ. ಮಲ್ಲೇಶ್‌ಗೌಡ ಮಾತನಾಡಿ, ಕನ್ನಡವನ್ನು ಜಗತ್ತಿನ ಅಚ್ಚರಿಗಳಲ್ಲೊಂದು ಎಂದು ವಿವರಣೆ ನೀಡಿದರು. ಕನ್ನಡಕ್ಕೆ ಇರುವಷ್ಟು ಸಾಹಿತ್ಯ ಸಂಪತ್ತು ಬೇರೆ ಯಾವ ಭಾರತೀಯ ಭಾಷೆಯಲ್ಲಿಲ್ಲ ಎಂದು ಹೇಳಿದರು. ನಾವು ಇತರ ಭಾಷೆಗಳ ಅಗತ್ಯತೆಯನ್ನು ಒಪ್ಪಿಕೊಂಡರೂ, ಕನ್ನಡದ ಮೂಲ ಅಸ್ತಿತ್ವ ಕಳೆದುಕೊಳ್ಳುತ್ತಿರುವುದು ಕಳವಳಕಾರಿ ಎಂದು ಅವರು ತಿಳಿಸಿದರು.

ಮಾಜಿ ಶಾಸಕ ಬಿ.ಆರ್. ಗುರುದೇವ್ ಅವರು ಮಾತನಾಡಿ, ಭಾಷೆ, ಧರ್ಮ, ಜಾತಿ ಹೆಸರಿನಲ್ಲಿ ವಿಭಜನೆ ಮಾಡುವ ಪ್ರಯತ್ನಗಳು ಸರಿಯಲ್ಲ ಎಂದು ಅಭಿಪ್ರಾಯಪಟ್ಟರಲ್ಲದೆ, ಕನ್ನಡ ಪರ ಸಂಘಟನೆಗಳ ಕೆಲವು ತೀವ್ರ ಕ್ರಮಗಳಿಗೆ ನಾನು ಒಪ್ಪುವುದಿಲ್ಲ. ಹಿಂದಿಗೂ ಗೌರವವಿದೆ, ಅದನ್ನು ಕಾಪಾಡಬೇಕು ಎಂದರು.

ನುಡಿ ಹಬ್ಬದ ಭಾಗವಾಗಿ ಕನ್ನಡಾಂಬೆ ರಥದ ಮೆರವಣಿಗೆ, ಉಚಿತ ಸಾಮೂಹಿಕ ವಿವಾಹ, ಆರೋಗ್ಯ ತಪಾಸಣಾ ಶಿಬಿರ, ಪುಸ್ತಕ ಮೇಳ, ಕೃಷಿ ಉಪಕರಣಗಳ ಮೇಳ, ಸಾಧಕರಿಗೆ ಮಲೆನಾಡು ರತ್ನ ಪ್ರಶಸ್ತಿ, ಕ್ರೀಡಾಕೂಟ, ಶಾಲಾ ಮಕ್ಕಳಿಗೆ ರಸಪ್ರಶ್ನೆ, ಸಂಜೆಯಲ್ಲಿ ಸುಗಮ ಸಂಗೀತ ಕಾರ್ಯಕ್ರಮ ಸೇರಿದಂತೆ ವಿವಿಧ ಕಾರ್ಯಕ್ರಮಗಳು ನಡೆದವು.

ತಣ್ಣೀರುಹಳ್ಳ ಮಠದ ವಿಜಯ ಕುಮಾರ ಸ್ವಾಮೀಜಿ, ಕಿರಿಕೊಡ್ಲಿ ಮಠದ ಸದಾಶಿವ ಸ್ವಾಮೀಜಿ, ತೆಂಕಲಗೂಡು ಮಠದ ಚನ್ನಸಿದ್ದೇಶ್ವರ ಶಿವಾಚಾರ್ಯ ಸ್ವಾಮೀಜಿ, ಬಂಡೆ ಮಠದ ಬಸವಲಿಂಗ ಸ್ವಾಮೀಜಿ, ಸಂಕಲಾಪುರ ಮಠದ ಶಾಂತವೀರ ಮಲ್ಲಿಕಾರ್ಜುನ ಸ್ವಾಮೀಜಿ, ಇಬ್ರಾಹಿಂ ಮುಸ್ಲಿಯಾರ್, ಫಾದರ್ ಜೀವನ ಪ್ರಭು, ಮಾಜಿ ಶಾಸಕ ಎಚ್.ಕೆ. ಕುಮಾರಸ್ವಾಮಿ, ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಪ್ರೀತಂ ಜೆ.ಗೌಡ, ಶಾಸಕ ಸಿಮೆಂಟ್ ಮಂಜು ಹಾಗೂ ಪ್ರತಿಭಾ ಮಂಜುನಾಥ್, ಜಿ.ಪಂ. ಸದಸ್ಯೆ ಚಂಚಲ ಕುಮಾರ ಸ್ವಾಮಿ, ಜಿಲ್ಲಾ ಬಿಜೆಪಿ ಅಧ್ಯಕ್ಷ ಸಿದ್ದೇಶ್ ನಾಗೇಂದ್ರ, ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷೆ ನೇತ್ರಾವತಿ ಮಂಜುನಾಥ್, ಬಿಜೆಪಿ ತಾಲ್ಲೂಕು ಅಧ್ಯಕ್ಷ ವಳಲಹಳ್ಳಿ ಅಶ್ವಥ್ ಸೇರಿದಂತೆ ಇನ್ನಿತರರು ಸಭೆಯಲ್ಲಿ ಭಾಗವಹಿಸಿದ್ದರು.

# ಅಧಿಕ ಒತ್ತಡವೇ ಅನಾರೋಗ್ಯಕ್ಕೆ ಕಾರಣ

• ಪ್ರಜೋದಯ ವರದಿ



**ಸಕಲೇಶಪುರ:** ಎಲ್ಲ ಬಾಗ್ಯಗಳಿಗಿಂತ ಆರೋಗ್ಯ ಬಾಗ್ಯ ಅತ್ಯುತ್ತಮ ಈ ಬಗ್ಗೆ ಹೆಚ್ಚಿನ ಕಾಳಜಿ ವಹಿಸುವುದು ಅಗತ್ಯವಿದೆ ಎಂದು ತೆಂಕಲಗೊಡು ಬೃಹನ್ಮಠದ ಶ್ರೀ ಚನ್ನಸಿದ್ದೇಶ್ವರ ಸ್ವಾಮಿಜಿ ಹೇಳಿದರು.

ಮಲೆನಾಡು ರಕ್ಷಣಾ ಸೇನೆ ಪಟ್ಟಣದ ಗುರುವೇಗೌಡ ಕಲ್ಯಾಣ ಮಂಟಪದಲ್ಲಿ ಸಾಲುಮರದ ತಿಮ್ಮಕ್ಕ ಸ್ಮರಣಾರ್ಥ ಗುರುವಾರ ಹಮ್ಮಿಕೊಂಡಿದ್ದ ಉಚಿತ ಆರೋಗ್ಯ ತಪಾಸಣಾ ಶಿಬಿರ ಉದ್ಘಾಟಿಸಿ ಆಶೀರ್ವಚನ ನೀಡಿ ಮಾತನಾಡಿದ ಅವರು, ಇಂದು ಹಣ ಸಂಪಾಧಿಸುವ ಭರದಲ್ಲಿ ಒತ್ತಡದೊಂದಿಗೆ ಜನರು ಕೆಲಸ ಮಾಡುತ್ತಿದ್ದಾರೆ. ಆದರೆ ಈ ಅಧಿಕ ಒತ್ತಡವೇ ಅನಾರೋಗ್ಯಕ್ಕೆ ಕಾರಣವಾಗಿದ್ದು, ಒತ್ತಡ ರಹಿತ ಜೀವನ ರೂಪಿಸಿಕೊಳ್ಳುವ ಅಗತ್ಯವಿದೆ ಎಂದು ಹೇಳಿದರು.

ದೇವರು ನಮಗೆ ಏನನ್ನು ಕೊಟ್ಟಿಲ್ಲ ಎಂದು ಕೊರಗದಿರಿ, ಉತ್ತಮ ಆರೋಗ್ಯ ಕೋಟಿ ರೂಪಾಯಿಗೆ ಸಮ. ಎಷ್ಟೇ ಸಂಪತ್ತಿದ್ದರು ಉತ್ತಮ ಆರೋಗ್ಯಕ್ಕೆ ಸಮವಲ್ಲ ಎಂದ ಅವರು, ನಾವು ವಾಸಿಸುವ ಪರಿಸರವನ್ನು ಸ್ವಚ್ಛ ಹಾಗೂ ಸುಂದರವಾಗಿ ಇಟ್ಟುಕೊಳ್ಳುವುದರೊಂದಿಗೆ ಪರಿಸರ ರಕ್ಷಿಸಿ ಬೆಳೆಸಬೇಕು. ಸಂಘ- ಸಂಸ್ಥೆಗಳ ಮುಖಂಡರು ಸಮಾಜಕ್ಕೆ ಮಾದರಿಯಾಗಿ ಬದುಕಬೇಕು ಎಂದರು.

ಮಾಜಿ ಸಚಿವ ಎಚ್.ಕೆ.ಕುಮಾರಸ್ವಾಮಿ ಅವರು ಮಾತನಾಡಿ, ಸಮಾಜ ಸದೃಡವಾಗಿರ ಬೇಕಾದರೆ ಅಲ್ಲಿನ ಜನರು ಆರೋಗ್ಯವಂತರಾಗಿರಬೇಕು. ಜನರ ಆರೋಗ್ಯದ ಬಗ್ಗೆ ಕಾಳಜಿ ವಹಿಸಿ ಉಚಿತ ಆರೋಗ್ಯ ತಪಾಸಣೆ ಶಿಬಿರ ಆಯೋಜಿಸುತ್ತಿರುವ ಮಲೆನಾಡು ರಕ್ಷಣಾ ವೇದಿಕೆ ಅಭಿನಂದನಾರ್ಹ ಎಂದು ಶ್ಲಾಘಿಸಿದರು.

ಮಾಜಿ ಶಾಸಕ ಗುರುದೇವ್ ಮಾತನಾಡಿ, ಉತ್ತಮ ಪರಿಸರ ಇಂದು ಆರೋಗ್ಯ ಕಾಪಾಡುವಲ್ಲಿ ಪ್ರಮುಖ ಪಾತ್ರ ವಹಿಸಲಿದೆ. ಉತ್ತಮ ಗಾಳಿ, ನೀರು ದೊರೆಯುವಂತಹ ಪರಿಸರವನ್ನು ನಾವು ರೂಪಿಸಿಕೊಳ್ಳಬೇಕಿದೆ. ಅಭಿವೃದ್ದಿಯ ಹೆಸರಿನಲ್ಲಿ ದೇವರು ಸೃಷ್ಟಿಸಿದ್ದ ಪರಿಸರವನ್ನು ನಾವು ಹಾಳು ಮಾಡುತ್ತಿದ್ದೇವೆ ಎಂದರು.

ನೂರಾರು ಜನರು ಉಚಿತ ಆರೋಗ್ಯ ತಪಾಸಣೆಯಲ್ಲಿ ಬಾಗಿಯಾಗಿದ್ದರು.

ಕಾರ್ಯಕ್ರಮದಲ್ಲಿ ಮಲೆನಾಡು ರಕ್ಷಣಾ ವೇದಿಕೆಯ ರಾಜ್ಯಾಧ್ಯಕ್ಷ ಸಾಗರ್ ಜಾನೇಕೆರೆ, ಜಿಲ್ಲಾಧ್ಯಕ್ಷ ರಮೇಶ್, ತಾಲ್ಲೂಕು ಅಧ್ಯಕ್ಷ ಮಂಜುದೇವ್, ಸಮಾಜ ಸೇವಕ ಬ್ಯಾಕರವಳ್ಳಿ ಜಯಣ್ಣ, ಪ್ರತಿಭಾ ಮಂಜುನಾಥ್ ಸೇರಿದಂತೆ ಹಲವರು ಇದ್ದರು.

# ಗ್ಯಾರಂಟಿ ಫಲಾನುಭವಿಗಳ ಸಂಘಟನೆ ನಿರಂತರ

• ಪ್ರಜೋದಯ ವರದಿ



**ಚನ್ನರಾಯಪಟ್ಟಣ:** ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಡಿ.6ರಂದು ಜಿಲ್ಲೆಗೆ ಆಗಮಿಸುತ್ತಿದ್ದು, ಅವರ ಸಭೆಗೆ ತಾಲ್ಲೂಕಿನಿಂದ 10 ಸಾವಿರ ಜನರು ಭಾಗವಹಿಸುವ ನಿರೀಕ್ಷೆಯೊಂದಿಗೆ ಪ್ರತಿ ಗ್ರಾಮ ಪಂಚಾಯಿತಿಗೆ ಭೇಟಿ ಕೊಟ್ಟು ನಿರಂತರವಾಗಿ ಗ್ಯಾರಂಟಿ ಫಲಾನುಭವಿಗಳನ್ನು ಸಂಘಟಿಸುವ ಕೆಲಸ ಮಾಡುತ್ತಿರುವುದಾಗಿ ತಾಲ್ಲೂಕು ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಎಲ್.ಪಿ.ಪ್ರಕಾಶ್‌ಗೌಡ ಹೇಳಿದರು.

ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ನಡೆದ ಗ್ಯಾರಂಟಿ ಅನುಷ್ಠಾನ ಸಮಿತಿಯ 19ನೇ ಮಾಸಿಕ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಮುಖ್ಯಮಂತ್ರಿಗಳು ಜಿಲ್ಲೆಯ ವಿವಿಧ ಅಭಿವೃದ್ಧಿ ಕಾರ್ಯಗಳ ಅನುಷ್ಠಾನಕ್ಕಾಗಿ ಜಿಲ್ಲೆಗೆ ಆಗಮಿಸುತ್ತಿದ್ದು, ತಾಲ್ಲೂಕಿನಿಂದ ಅತಿ ಹೆಚ್ಚು ಜನರನ್ನು ಕಾರ್ಯಕ್ರಮಕ್ಕಾಗಿ ಕರೆ ತರುವಂತೆ ಸಂಸದ ಶ್ರೇಯಸ್ ಪಟೇಲ್‌ರವರು, ಮತ್ತು ಮಾಜಿ ಎಂಎಲ್ಸಿ ಎಂ.ಎ. ಗೋಪಾಲಸ್ವಾಮಿ ಸೂಚನೆ ಮೇರೆಗೆ ತಾವು ಮತ್ತು ಗ್ಯಾರೆಂಟಿ ಸಮಿತಿ ಸದಸ್ಯರುಗಳು ತಾಲ್ಲೂಕಿನ 40 ಪಂಚಾಯಿತಿಗಳಿಗೆ ಭೇಟಿ ಗ್ಯಾರಂಟಿ ಫಲಾನುಭವಿಗಳನ್ನು ಸಂಘಟಿಸುವ ಕೆಲಸ ಮಾಡುತ್ತಿದ್ದೇವೆ ಎಂದರು.

ಗ್ಯಾರಂಟಿ ಅನುಷ್ಠಾನದಲ್ಲಿ ಜಿಲ್ಲೆಯಲ್ಲಿಯೇ 2ನೇ ಸ್ಥಾನ ಹಾಗೂ ರಾಜ್ಯದಲ್ಲಿ 3ನೇ ಸ್ಥಾನ ಹೊಂದಿರುವ ನಮ್ಮ ತಾಲ್ಲೂಕಿನಿಂದ ಅತಿ ಹೆಚ್ಚು ಜನ ಭಾಗವಹಿಸಬೇಕಿದೆ. ಪ್ರತಿ ಗ್ರಾಮ ಪಂಚಾಯಿತಿಗೆ 5 ಬಸ್‌ಗಳ ವ್ಯವಸ್ಥೆ ಮಾಡಲಾಗಿದೆ ಎಂದರು.

ಗೃಹಲಕ್ಷ್ಮಿ ಯೋಜನೆಯಡಿ ತಾಲ್ಲೂಕು ಶೇ.98.1 ರಷ್ಟು ಸಾಧನೆ ಮಾಡಿದ್ದು, ಇನ್ನುಳಿದಂತೆ ಗೃಹ ಜ್ಯೋತಿ, ಅನ್ನ ಭಾಗ್ಯ, ಯುವನಿಧಿ, ಶಕ್ತಿ ಯೋಜನೆಗಳಲ್ಲಿ ಶೇ.80 ರಷ್ಟು ಫಲಾನುಭವಿಗಳು ಯೋಜನೆಗಳ ಲಾಭ ಪಡೆಯುತ್ತಿದ್ದಾರೆ. ತಾಲ್ಲೂಕು ಪಂಚಾಯಿತಿ ಕಾರ್ಯ ನಿರ್ವಹಣಾಧಿಕಾರಿ ಮತ್ತು ಇಲಾಖೆಗಳ ಅಧಿಕಾರಿಗಳ ಉತ್ತಮ ಕಾರ್ಯ ವೈಖರಿಯೊಂದಿಗೆ ಎಲ್ಲರನ್ನೂ ಯೋಜನೆಯ ವ್ಯಾಪ್ತಿಗೆ ಒಳಪಡಿಸುವ ಕೆಲಸ ಮಾಡುತ್ತಿರುವುದು ಈ ಸಾಧನೆಗೆ ಕಾರಣವಾಗಿದೆ ಎಂದರು.

ತಾಪಂ ಕಾರ್ಯ ನಿರ್ವಹಣಾಧಿಕಾರಿ ಜಿ.ಆರ್.ಹರೀಶ್ ಇತರರಿದ್ದರು.

## ಮತಪಟ್ಟಿ ಪರಿಷ್ಕರಣೆ: ತಡೆಗೆ ಸುಪ್ರೀಂ ನಕಾರ

**ನವದೆಹಲಿ:** ಚುನಾವಣಾ ಆಯೋಗ ಶಾಸನಬದ್ಧವಾಗಿ ಮತ್ತು ಸಾಂವಿಧಾನಿಕವಾಗಿದ್ದು ದೇಶಾದ್ಯಂತ ಮತದಾರರ ವಿಶೇಷ ತೀವ್ರ ಪರಿಷ್ಕರಣೆನಡೆಸಲು ಅಧಿಕಾರ ಹೊಂದಿದೆ ಮತ್ತು ಪ್ರಕ್ರಿಯೆಗೆ ತಡೆ ನೀಡಲು ಸಾಧ್ಯವಿಲ್ಲ ಎಂದು ಸುಪ್ರೀಂಕೋರ್ಟ್ ಹೇಳಿದೆ.

ಸುಪ್ರೀಂಕೋರ್ಟ್‌ನ ಈ ಮಹತ್ವದ ತೀರ್ಪಿನಿಂದ ಚುನಾವಣಾ ಆಯೋಗಕ್ಕೆ ಇದ್ದ ಅಡೆ ತಡೆ ದೂರವಾಗಿದ್ದು ಪಶ್ಚಿಮ ಬಂಗಾಳ ಸೇರಿದಂತೆ ದೇಶದ ವಿವಿಧ ಭಾಗಗಳಲ್ಲೊ ಮತದಾರರ ಪಟ್ಟಿ ತೀವ್ರ ಪರಿಷ್ಕರಣೆಗೆ ವಿರೋಧಿಸಿದ್ದ ರಾಜ್ಯಗಳಿಗೆ ಹಿನ್ನಡೆ ಆಗಿದೆ.

ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್ ಮತ್ತು ನ್ಯಾಯಮೂರ್ತಿ ಜೋಯ್ಮಲ್ಯ ಬಾಗ್ಚಿ ಅವರಿದ್ದ ಪೀಠ ಮತದಾರರ ತೀವ್ರ ಪರಿಷ್ಕರಣೆ ಕಾರ್ಯಕ್ಕೆ ತಡೆ ನೀಡಲು ನಿರಾಕರಿಸಿದೆ.

# ಉತ್ತಮ ಕೆಲಸ ಮಾಡಬೇಕೆಂಬ ಮನೋಭಾವವಿರಬೇಕು

• ಪ್ರಜೋದಯ ವರದಿ



**ಹಾಸನ:** ನಮ್ಮ ಮನೋ ಇಚ್ಛಾಶಕ್ತಿಯ ಪ್ರಕಾರ ಕೆಲಸ ಮಾಡಬೇಕು. ಉತ್ತಮ ಕೆಲಸ ಮಾಡಬೇಕು ಎಂಬ ಮನೋಭಾವನೆ ನಮ್ಮಲ್ಲಿರಬೇಕು. ಹಾಗಾದಾಗ ಮಾತ್ರ ಸಂವಿಧಾನದ ಅರ್ಥಪೂರ್ಣತೆಗೆ ನಾವು ಗೌರವ ನೀಡಿದಂತಾಗುತ್ತದೆ ಎಂದು ಮಲೆನಾಡು ಇಂಜಿನಿಯರಿಂಗ್ ಕಾಲೇಜು ಪ್ರಾಂಶುಪಾಲ ಡಾ. ಹೆಚ್.ಜೆ.ಅಮರೇಂದ್ರ, ತಿಳಿಸಿದರು.

ನಗರದ ಮಲೆನಾಡು ಇಂಜಿನಿಯರಿಂಗ್ ಕಾಲೇಜು ವತಿಯಿಂದ ಏರ್ಪಡಿಸಲಾಗಿದ್ದ ಸಂವಿಧಾನ ದಿನಾಚರಣೆಯಲ್ಲಿ ಮಾತನಾಡಿದ ಅವರು, ನಾವೆಲ್ಲ ಭಾರತೀಯರು ಸಂವಿಧಾನಕ್ಕೆ ಗೌರವ ನೀಡುತ್ತೇವೆ. ಕಾನೂನಾತ್ಮಕ, ಆಡಳಿತ ಸುಧಾರಣೆ, ಸಾಮಾಜಿಕ, ಅರ್ಥಿಕ ರಂಗದಲ್ಲಿ ಸಂವಿಧಾನ ನೀಡಿರುವ ಭಾರತದ ಜನತೆಯಾದ ನಾವು ಭಾರತವನ್ನು ಸಾರ್ವಭೌಮ, ಸಮಾಜವಾದಿ, ಧರ್ಮ ನಿರಪೇಕ್ಷ ಪ್ರಜಾಸತ್ತಾತ್ಮಕ ಗಣರಾಜ್ಯವಾಗಿದೆ ಎಂದರು.

ಸಾಮಾಜಿಕ, ಅರ್ಥಿಕ ಮತ್ತು ರಾಜಕೀಯ ನ್ಯಾಯವನ್ನು, ವಿಚಾರ, ಅಭಿವ್ಯಕ್ತಿ, ನಂಬಿಕೆ, ಧರ್ಮ ಮತ್ತು ಉಪಾಸನೆಯ ಸ್ವಾತಂತ್ರ್ಯವನ್ನು, ಸ್ಥಾನ- ಮಾನ ಮತ್ತು ಅವಕಾಶಗಳ ಸಮಾನತೆಯನ್ನು ದೊರೆಯುವಂತೆ ಮಾಡುವುದಕ್ಕಾಗಿ, ವ್ಯಕ್ತಿ ಗೌರವ, ದೇಶದ ಏಕತೆ ಮತ್ತು ಸಮಗ್ರತೆಗಾಗಿ ಎಲ್ಲರಲ್ಲಿ ಭ್ರಾತೃತ್ವ ಭಾವನೆಯನ್ನು ಮೂಡಿಸುವುದಕ್ಕೆ ದೃಡ ಸಂಕಲ್ಪ ಮಾಡಬೇಕೇಂದು ತಿಳಿಸಿದರು.

1949 ನೆಯ ಇಸವಿಯ ನವಂಬರ್ ತಿಂಗಳ 26 ನೇ ದಿನದಂದು ಈ ಸಂವಿಧಾನವನ್ನು ನಮಗೆ ನಾವೇ ಅರ್ಪಿಸಿಕೊಂಡು ಅಂಗೀಕರಿಸಿ, ಶಾಸನವಾಗಿ ವಿಧಿಸಿ ಕೊಂಡಿದ್ದೇವೆ ಎಂದು ಹೇಳಿದರು.

ಕಾಲೇಜು ವಿದ್ಯಾರ್ಥಿ ಕ್ಷೇಮಾಭಿವೃದ್ದಿ ಅಧಿಕಾರಿಗಳಾದ ಡಾ. ಇಂದ್ರ ಬಹುದ್ದೂರು ಅವರು ಭಾರತ ಸಂವಿಧಾನದ ಪೀಠಿಕೆಯನ್ನು ಓದುವ ಮೂಲಕ ಪ್ರತಿಜ್ಞೆಸ್ವೀಕರಿಸಲಾಯಿತು.

ಕಾರ್ಯಕ್ರಮದಲ್ಲಿ ಕಾಲೇಜು ನಿರ್ದೇಶಕರಾದ ಡಾ.ಎಸ್.ಪ್ರಧೀಪ್, ನಿವೃತ್ತ ಪ್ರಾಂಶುಪಾಲ ಡಾ.ಎ.ಜೆ. ಕೃಷ್ಣಯ್ಯ, ವಿದ್ಯಾರ್ಥಿ ಕ್ಷೇಮಾಭಿವೃದ್ದಿ ಸಹ ಅಧಿಕಾರಿ ಡಾ. ಶಿವಶಂಕರ್, ವಿಭಾಗದ ಮುಖ್ಯಸ್ಥರು, ನೌಕರರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಪರಿಕಲ್ಪನೆಯ ನೆನಪಿನ ಉದ್ಯಾನವನ ನಿರ್ಮಾಣಕ್ಕೆ ಭೂಮಿಪೂಜೆ

• ಪ್ರಜೋದಯ ವರದಿ



**ಅರಕಲಗೂಡು:** ಪರಿಸರಕ್ಕಾಗಿ ನಾವು ರಾಜ್ಯ ಸಂಘಟನೆಯ ವತಿಯಿಂದ ನೂತನ ಪರಿಕಲ್ಪನೆಯ ನೆನಪಿನ ಉದ್ಯಾನವನ ನಿರ್ಮಾಣಕ್ಕೆ ಭೂಮಿ ಪೂಜೆ ಸಲ್ಲಿಸಲಾಯಿತು.

ತಾಲ್ಲೂಕಿನ ಕೊಣನೂರು ಹೋಬಳಿ ಬಸಲ ಹಳ್ಳಿಯಲ್ಲಿ ಹಮ್ಮಿಕೊಂಡಿದ್ದ ನೆನಪಿನ ಉದ್ಯಾನವನ ನಿರ್ಮಾಣಕ್ಕಾಗಿ ಗ್ರಾಮಸ್ಥರು ಮತ್ತು ವಿವಿಧ ಮಠಾಧೀಶರೊಂದಿಗೆ ಭೂಮಿಪೂಜೆ ಸಲ್ಲಿಸಿದ ಮಾಜಿ ಶಾಸಕ ಎ.ಟಿ.ರಾಮಸ್ವಾಮಿ ಅವರು ಮಾತನಾಡಿ, ಅರಣ್ಯನಾಶ ಮತ್ತಿತರ ಮಾನವ ಕಾರಣಗಳಿಂದ ಪ್ರಕೃತಿ ವಿಕೋಪಗಳು ಮತ್ತು ಹವಾಮಾನದ ವೈಪರೀತ್ಯಗಳು ಹೆಚ್ಚುತ್ತಿರುವ ಇಂದಿನ ಪರಿಸ್ಥಿತಿ ಯಲ್ಲಿ ನಮಗುಳಿದಿರುವ ದಾರಿ ಪರಿಸರವನ್ನು ಉಳಿಸಿಕೊಂಡು ಸ್ವಚ್ಛ, ಸುಂದರವಾಗಿ ಬೆಳೆಸಿಕೊಂಡು ಹೋಗುವುದಾಗಿದೆ ಎಂದರು.

ಜನರು ತಮ್ಮ ಸ್ವಾರ್ಥಕ್ಕೆ ಪರಿಸವನ್ನು ಹಾಳು ಮಾಡುತ್ತಿದ್ದರೆ, ಸರ್ಕಾರಗಳು ವಿವಿಧ ಯೋಜನೆಗಳ ಹೆಸರಿನಲ್ಲಿ ದಟ್ಟಾರಣ್ಯಗಳನ್ನು ಬರಡು ಮಾಡು ತ್ತಿದ್ದು, ಭೂಮಿಯ ಒಡಲನ್ನು ಅಗೆದು ಪ್ರಕೃತಿಗೆ ವಿರುದ್ಧವಾಗಿ ನೆಡದುಕೊಂಡು ಪ್ರಮಾದವೆಸಗುತ್ತಿದೆ. ಊಟಿಯಿಂದ ಗುಜರಾತ್‌ವರೆಗೆ ವಿಸ್ತರಿಸಿ ಸುಮಾರು 40ಕ್ಕೂ ಹೆಚ್ಚು ನದಿಗಳ ಉಗಮಸ್ಥಾನವಾಗಿರುವ ವಿಶ್ವ ಪಾರಂಪರಿಕ ತಾಣದ ಸ್ಥಾನ ಪಡೆದಿರುವ ಪಶ್ಚಿಮ ಘಟ್ಟಗಳು ಇದೀಗ ವಿನಾಶದ ಅಂಚಿನಲ್ಲಿದೆ. ಪಶ್ಚಿಮ ಘಟ್ಟ ಉಳಿಸಿ ಎಂಬ ಹೋರಾಟವನ್ನು ನ.29ರಿಂದ ಬೆಂಗಳೂರಿನಲ್ಲಿ ಪರಿಸರಕ್ಕಾಗಿ ನಾವು ಸಂಘಟನೆಯ ವತಿಯಿಂದ ಹಮ್ಮಿಕೊಳ್ಳುತ್ತಿದ್ದೇವೆ, ನಮ್ಮ ಸಲಹುತ್ತಿ ರುವ ಪರಿಸರದ ಉಳಿವಿಗಾಗಿ ಆಸಕ್ತರು ಹೋರಾಟದಲ್ಲಿ ಕೈ ಜೋಡಿಸಿ ಎಂದು ಹೇಳಿದರು.

ಮಾದರಿ ನೆನಪಿನ ಉದ್ಯಾನವನ ನಿರ್ಮಾಣಕ್ಕೆ ಚಾಲನೆ ನೀಡಿದ್ದೇವೆ. ಇಲ್ಲಿನ 6 ಎಕರೆ ಪ್ರದೇಶ ದಲ್ಲಿ ವಿವಿಧ ಹಣ್ಣಿನ, ಬಹುಪಯೋಗಿ ಮರಗಳನ್ನು ನೆಟ್ಟು ಬೆಳೆಸಲಾಗುವುದು. ಉದ್ಯಾನದ ಮಧ್ಯೆ ಆಟದ ಮೈದಾನ, ವಾಕಿಂಗ್ ಪಾತ್‌ನ್ನು ಯೋಜನಾಬದ್ಧವಾಗಿ ನಿರ್ಮಿಸಲಾಗುವುದು. ಹುಟ್ಟುಹಬ್ಬ, ಮದುವೆ, ವಾರ್ಷಿಕೋತ್ಸವ, ಹಿರಿಯರ ನೆನಪಿನಲ್ಲಿ ಇನ್ನಿತರೆ ಸಂದರ್ಭಗಳ ನೆನಪಿಗಾಗಿ ಸಾರ್ವಜನಿಕರು, ಗ್ರಾಮಸ್ಥರು ಒಂದು ಗಿಡನೆಟ್ಟು ಅದರ ಪೋಷಣೆ ಯನ್ನು ಮಾಡುವ ಅವಕಾಶ ಮಾಡಿಕೊಟ್ಟು ಉದ್ಯಾನವನದ ಉಸ್ತುವಾರಿಯನ್ನು ಸಂಘಟನೆಯು ವಿವಿಧ ಪರಿಸರ ತಜ್ಞರ ನೆರವಿನೊಂದಿಗೆ ಮಾದರಿ ಉದ್ಯಾನವ ನವನ್ನಾಗಿ ನೋಡಿಕೊಳ್ಳುವುದು ಎಂದರು.

ಉದ್ಯಾನವನದ ಪ್ರಾರಂಭದ ನೆನಪಗಾಗಿ 10 ವಿವಿಧ ಸಸಿಗಳನ್ನು ನೆಡಲಾಯಿತು. ನೀಟ್ ಪರೀಕ್ಷೆಯಲ್ಲಿ ಉತ್ತಮ ಸಾಧನೆ ತೋರಿದ ನಿಲಕುಂದ ಗ್ರಾಮದ ಪ್ರಣತಿ ಮತ್ತು ಹಾಕಿಯಲ್ಲಿ ರಾಷ್ಟ್ರ ಮಟ್ಟಕ್ಕೆ ಆಯ್ಕೆಯಗಿರುವ ಕೆಸವತ್ತೂರಿನ ಧನ್ವಿತಾ ಅವರನ್ನು ಸನ್ಮಾನಿಸಿ ಸಮಿತಿ ವತಿಯಿಂದ ನಗದು ಬಹುಮಾನ ನೀಡಲಾಯಿತು. ಮಹಿಳೆಯರು, ಪುರುಷರು ಮತ್ತು ಮಕ್ಕಳಿಗಾಗಿ ಜನಪದ ಆಟಗಳನ್ನು ಆಯೋಜಿಸಿ ಬಹುಮಾನ ನೀಡಲಾಯಿತು.

ಸ್ವತಂತ್ರ ಬಸವಲಿಂಗ ಸ್ವಾಮೀಜಿ ಮನೆಹಳ್ಳಿ ಮಠದ ಮಹಾಂತ ಶಿವಲಿಂಗ ಸ್ವಾಮೀಜಿ, ಕೆಸವತ್ತೂರು ಮಠದ ಬಸವ ರಾಜೇಂದ್ರ ಸ್ವಾಮೀಜಿ, ಚಿಲುಮೆ ಮಠದ ಜಯದೇವ ಸ್ವಾಮೀಜಿ, ತೊರೆನೂರು ಮಠದ ಮಲ್ಲೇಶ ಸ್ವಾಮೀಜಿ, ಸೋಮವಾರಪೇಟೆಯ ನಿಶ್ಚಲ ನಿರಂಜನ ದೇಶಿಕೇಂದ್ರಸ್ವಾಮೀಜಿ ಇನ್ನಿತರರಿದ್ದರು.

# ಕಳಪೆ ಡಾಂಬರೀಕರಣ: ಗ್ರಾಮಸ್ಥರ ಆಕ್ರೋಶ

• ಪ್ರಜೋದಯ ವರದಿ



**ಬೇಲೂರು:** ಗುತ್ತಿಗೆದಾರರಿಗೆ ಬಿಲ್ ಮಾಡಿಕೊಳ್ಳುವ ದೃಷ್ಟಿಯಿಂದ ಪಿಡಬ್ಲ್ಯೂಡಿ ಸೂಪರ್ವೈಸರ್ ಸಿದ್ದೇಶ್ ಸ್ವತಹ ಸ್ಥಳದಲ್ಲಿ ಇದ್ದುಕೊಂಡು ನಾಮಕಾವಾಸ್ಥೆಗೆ ಗುಂಡಿ ಮುಚ್ಚುವ ಡಾಂಬರೀಕರಣ ಮಾಡುತ್ತಿದ್ದಾರೆ ಎಂದು ಬಳಕೆದರ ವೇದಿಕೆಯ ಅಣ್ಣೇಗೌಡ ಸುತ್ತಮುತ್ತಲ ಗ್ರಾಮಸ್ಥರು ಆಕ್ರೋಶ ವ್ಯಕ್ತಪಡಿಸಿದರು.

ಬೇಲೂರಿನಿಂದ ಬಿಕ್ಕೋಡುವರೆಗೂ ಗುಂಡಿ ಮುಚ್ಚುವ ಕಾಮಗಾರಿ ಗುಣಮಟ್ಟವನ್ನು ಕಾಯ್ದುಕೊಂಡಿಲ್ಲ. ಅಲ್ಲದೇ, ಕಳಪೆ ಕಾಮಗಾರಿಯ ಬಗ್ಗೆ ಅಧಿಕಾರಿಗಳು ಚಕಾರವೆತ್ತುತ್ತಿಲ್ಲ. ಫೋನ್ ಮಾಡಿ ಕೇಳಿದರೆ ನಾನು ಊರಿನಲ್ಲಿ ಇಲ್ಲ ಎಂದು ಹೇಳುತ್ತಾರೆ. ನಮ್ಮ ಸೂಪರ್ವೈಸರ್ ಸ್ಥಳದಲ್ಲಿದ್ದು ಕಾಮಗಾರಿ ಮಾಡಿಸುತ್ತಿದ್ದಾರೆ ಎಂದು ಹೇಳುತ್ತಾರೆ. ಇಂತಹ ಅಧಿಕಾರಿಗಳಿಂದ ಕಳಪೆ ಕಾಮಗಾರಿಗೆ ದಾರಿ ಮಾಡಿ ಕೊಡುತ್ತಿದ್ದಾರೆಂದು ಅವರು ಆಕ್ರೋಶ ವ್ಯಕ್ತಪಡಿಸಿದರು.

ಸರಕಾರ ರಸ್ತೆ ಗುಂಡಿ ಮುಚ್ಚುವ ಅಭಿವೃದ್ಧಿಗೆ ಲಕ್ಷ ಗಟ್ಟಲೆ ಹಣವನ್ನು ಖರ್ಚು ಮಾಡುತ್ತಿದೆ. ಅದರೆ ಅಧಿಕಾರಿಗಳು ಮತ್ತು ಗುತ್ತಿಗೆದಾರರ ನಿರ್ಲಕ್ಷ್ಯದಿಂದ ಕಳಪೆ ಕಾಮಗಾರಿಯಾಗುತ್ತಿದೆ. ಗುತ್ತಿಗೆದಾರನ ಪರವಾಗಿ ಪಿಡಬ್ಲ್ಯೂಡಿ ಸೂಪರ್ವೈಸರ್ ಸಿದ್ದೇಶ್ ಕೆಲಸ ಮಾಡುತ್ತಿದ್ದಾರೆ ಇಂತಹ ಸಿಬ್ಬಂದಿಯನ್ನು ಕೂಡಲೇ ವಜಾಗೊಳಿಸಿ ಜಿಲ್ಲಾಮಟ್ಟದ ಸಂಬಂಧಪಟ್ಟ ಅಧಿಕಾರಿಗಳು ಎಚ್ಚೆತ್ತುಕೊಂಡು ಗುಣಮಟ್ಟದ ಗುಂಡಿ ಮುಚ್ಚುವ ರಸ್ತೆ ಕಾಮಗಾರಿ ಮಾಡಿಸಬೇಕೆಂದು ಒತ್ತಾಯಿಸಿದರು.

## ಇಂದು ಹಲವೆಡೆ ವಿದ್ಯುತ್ ವ್ಯತ್ಯಯ


• ಪ್ರಜೋದಯ ವರದಿ

**ಹಾಸನ:** ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದ ವತಿಯಿಂದ ನ.28 ರಂದು 66/11 ಕೆ.ವಿ. ಚಿಕ್ಕಕೊಂಡಗೊಳ ವಿ.ವಿ ಕೇಂದ್ರದಲ್ಲಿ ತುರ್ತು ನಿರ್ವಹಣಾ ಕೆಲಸವನ್ನು ಹಮ್ಮಿಕೊಂಡಿರುವುದರಿಂದ, ಬೆಳಿಗ್ಗೆ 10 ಗಂಟೆಯಿಂದ ಸಂಜೆ 6 ಗಂಟೆ ಯವರೆಗೆ ಚಿಕ್ಕಕೊಂಡಗೊಳ ವಿ.ವಿ ಕೇಂದ್ರದಿಂದ ವಿದ್ಯುತ್ ಸರಬರಾಜಾಗುವ ವಿದ್ಯಾನಗರ, ಚಿಕ್ಕಹೊನ್ನೇನಹಳ್ಳಿ, ಎಂ.ಸಿ.ಎಫ್ ಕ್ವಾಟ್ರಸ್, ಹರಳಹಳ್ಳಿ, ಗುಂಡೇಗೌಡನ ಕೊಪ್ಪಲು, ಎಂ.ಜಿ ರಸ್ತೆ, ಮಾವಿನಹಳ್ಳಿ, ರಿಂಗ್ ರಸ್ತೆ, ಜಯನಗರ, ಆಕಾಶವಾಣಿ, ಸರ್ಕಾರಿ ವಿಜ್ಞಾನ ಕಾಲೇಜು, ಆರ್.ಸಿ ರಸ್ತೆ, ರಂಗೋಲಿಹಳ್ಳ, ಉತ್ತರ ಬಡಾವಣೆ, ಸದಾಶಿವನಗರ, ಪೆನ್ಷನ್ ಮೊಹಲ್ಲ, 80ಫೀಟ್ ರಸ್ತೆ, ರಾಜ್‌ಕುಮಾರ್ ನಗರ, ಹೇಮಾವತಿ ನಗರ ಮತ್ತು ಕಬ್ಬಳ್ಳಿ ಹಾಗೂ ಸುತ್ತಮುತ್ತಲ ಪ್ರದೇಶಗಳ ಸ್ಥಾವರಗಳಿಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದೆ ಎಂದು

ಕವಿಪ್ರನಿನಿ, ಹಾಸನ ಕಾರ್ಯಾಚರಣೆ ವಿಭಾಗದ ಕಾರ್ಯ ನಿರ್ವಾಹಕ ಇಂಜಿನಿಯರ್ (ವಿ) ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸರ್ಕಾರಿ ಶಾಲೆಗಳ ಕತ್ತು ಹಿಸುಕುವ ಹುನ್ನಾರ

• ಪ್ರಜೋದಯ ವರದಿ



**ಹಾಸನ:** ಸರ್ಕಾರಿ ಶಾಲೆಗಳಿಗೆ ಮೂಲಸೌಕರ್ಯ ಕಲ್ಪಿಸಿ ಬಡ ಮಕ್ಕಳ ಶಿಕ್ಷಣಕ್ಕೆ ಪ್ರೋತ್ಸಾಹಿಸಬೇಕಿದ್ದ ರಾಜ್ಯ ಸರ್ಕಾರ ಹೊಸದಾಗಿ ಕೆಪಿಎಸ್ ಮ್ಯಾಗ್ನೆಟ್ ಶಾಲೆಗಳನ್ನು ಆರಂಭಿಸಿ ಸರ್ಕಾರಿ ಶಾಲೆಗಳ ಕತ್ತು ಹಿಸುಕುವ ಪ್ರಯತ್ನಕ್ಕೆ ಮುಂದಾಗಿದೆಯೆಂದು ಆಲ್ ಇಂಡಿಯಾ ಡೆಮಾಕ್ರಟಿಕ್ ಸ್ಟುಡೆಂಟ್ ಆರ್ಗನೈಜೇಷನ್ (ಎಐಡಿಎಸ್‌ಒ) ಜಿಲ್ಲಾ ಸಂಚಾಲಕಿ ಚೈತ್ರಾ ಅವರು ಆರೋಪಿಸಿದರು.

ಸುದ್ದಿಗೋಷ್ಟಿಯಲ್ಲಿ ಗುರುವಾರ ಮಾತನಾಡಿ, ಸರ್ಕಾರದ ಈ ಅವೈಜ್ಞಾನಿಕ ನಿರ್ಧಾರದಿಂದ ರಾಜ್ಯದ 40 ಸಾವಿರ ಶಾಲೆಗಳ ಭವಿಷ್ಯ ಮಂಕಾಗಿದೆ. ಶಿಕ್ಷಣ ಸಚಿವ ಮಧು ಬಂಗಾರಪ್ಪ ಅವರು ಒಂದೂ ಶಾಲೆಯನ್ನು ಮುಚ್ಚುವುದಿಲ್ಲವೆಂದು ಹೇಳುತ್ತಾರೆ. ಆದರೆ ಸರ್ಕಾರವೇ ಹೊರಡಿಸಿದ ಸುತ್ತೋಲೆ ಆತಂಕ ಹುಟ್ಟಿಸುತ್ತಿದೆ ಎಂದರು.

ಗ್ರಾಮ ಪಂಚಾಯಿತಿಗೆ ಒಂದರಂತೆ ರಾಜ್ಯದಲ್ಲಿ 6,000 ಕೆಪಿಎಸ್ ಮ್ಯಾಗ್ನೆಟ್ ಶಾಲೆಯನ್ನು ಸ್ಥಾಪಿಸುವ ಗುರಿಯನ್ನು ಸರ್ಕಾರವು ಹೊಂದಿದೆ. ಮೊದಲ ಹಂತದಲ್ಲಿ ರಾಜ್ಯದ 800 ಸರ್ಕಾರಿ ಶಾಲೆಗಳನ್ನು ಕೆಪಿಎಸ್ ಮ್ಯಾಗ್ನೆಟ್ ಶಾಲೆಗಳೆಂದು ಗುರುತಿಸಲಾಗಿದೆ. ಈ ಯೋಜನೆಯನ್ನು ಜಾರಿಗೊಳಿಸಲು ರಾಮನಗರದ ಚನ್ನಪಟ್ಟಣ ತಾಲ್ಲೂಕಿನ ಹೊಂಗನೂರಿನ ಶಾಲೆಯನ್ನು ಕೆಪಿಎಸ್ ಮ್ಯಾಗ್ನೆಟ್ ಶಾಲೆಯೆಂದು ಗುರುತಿಸಲಾಗಿದೆ ಎಂದರು.

ಹೊಂಗನೂರಿನಿಂದ 6 ಕಿ.ಮೀ. ವ್ಯಾಪ್ತಿಯೊಳಗಿರುವ 77 ವಿದ್ಯಾರ್ಥಿಗಳಿರುವ ಹೊಡಿಕೆ ಹೊಸಹಳ್ಳಿ ಸರ್ಕಾರಿ ಪ್ರಾಥಮಿಕ ಶಾಲೆ, 82 ವಿದ್ಯಾರ್ಥಿಗಳಿರುವ ಕನ್ನಿದೊಡ್ಡಿ ಶಾಲೆ, 31 ವಿದ್ಯಾರ್ಥಿಗಳಿರುವ ಅಮ್ಮಳ್ಳಿ ದೊಡ್ಡಿ ಶಾಲೆ , 100 ವಿದ್ಯಾರ್ಥಿಗಳಿರುವ ಸಂತೆಮೊಗೇನಹಳ್ಳಿ ಶಾಲೆ, 20 ವಿದ್ಯಾರ್ಥಿಗಳಿರುವ ಮೊಗೇನಹಳ್ಳಿ ದೊಡ್ಡಿ, 80 ವಿದ್ಯಾರ್ಥಿಗಳಿರುವ ಸುಣ್ಣಘಟ್ಟ ಶಾಲೆಗಳನ್ನು ಹೊಂಗನೂರಿನ ಕೆಪಿಎಸ್ ಮ್ಯಾಗ್ನೆಟ್ ಶಾಲೆಗೆ ವಿಲೀನಗೊಳಿಸಲಾಗಿದೆ. ಇದೇ ವ್ಯವಸ್ಥೆ ರಾಜ್ಯಾದ್ಯಂತ ವಿಸ್ತರಣೆಯಾಗುವ ಸಾಧ್ಯತೆಯಿದೆ ಎಂದರು.

# ಮೂಲಭೂತ ಹಕ್ಕುಗಳನ್ನು ಖಾತರಿಪಡಿಸುವ ಸಂವಿಧಾನ

• ಪ್ರಜೋದಯ ವರದಿ



**ಆಲೂರು:** ಸಂವಿಧಾನವು ನ್ಯಾಯ, ಸ್ವಾತಂತ್ರ್ಯ, ಸಮಾನತೆ ಮತ್ತು ಭ್ರಾತೃತ್ವದ ತತ್ವಗಳನ್ನು ಎತ್ತಿ ಹಿಡಿಯುವ ರಾಷ್ಟ್ರದ ಬದ್ಧತೆಯನ್ನು ನೆನಪಿಸುತ್ತದೆ ಎಂದು ತಹಸೀಲ್ದಾರ್ ಮಲ್ಲಿಕಾರ್ಜುನ್ ತಿಳಿಸಿದರು.

ತಾಲ್ಲೂಕು ಆಡಳಿತ ಮತ್ತು ಸಮಾಜ ಕಲ್ಯಾಣ ಇಲಾಖೆ ರವರ ಸಹಯೋಗದಲ್ಲಿ ಪಟ್ಟಣದ ಮಿನಿ ವಿಧಾನಸೌಧ ಆವರಣದಲ್ಲಿ ಏರ್ಪಡಿಸಲಾಗಿದ್ದ ಸಂವಿಧಾನ ದಿನಾಚರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ಕರಡು ಸಮಿತಿಯ ಅಧ್ಯಕ್ಷರಾದ ಡಾ.ಬಿ.ಆರ್. ಅಂಬೇಡ್ಕರ್ ನೇತೃತ್ವದಲ್ಲಿ ಸಂವಿಧಾನವನ್ನು ನಿಖರವಾಗಿ ರಚಿಸಲಾಗಿದೆ. ಭಾರತ ಸಂವಿಧಾನವು ವಿಶ್ವದ ಯಾವುದೇ ಸಾರ್ವಭೌಮ ಗಣರಾಜ್ಯದ ಸುದೀರ್ಘ ಲಿಖಿತ ಸಂವಿಧಾನವಾಗಿದೆ. ಸಂವಿಧಾನವು ಭಾರತವನ್ನು ಸಮಾಜವಾದಿ, ಜಾತ್ಯತೀತ, ಪ್ರಜಾಪ್ರಭುತ್ವ ಗಣರಾಜ್ಯವಾಗಿ ಸ್ಥಾಪಿಸುತ್ತದೆ. ಸಂವಿಧಾನವು ತನ್ನ ನಾಗರಿಕರಿಗೆ ಸಮಾನತೆಯ ಹಕ್ಕು, ವಾಕ್‌ಸ್ವಾತಂತ್ರ್ಯ ಮತ್ತು ಜೀವಿಸುವ ಹಕ್ಕು ಸೇರಿದಂತೆ ವ್ಯಾಪಕವಾದ ಮೂಲಭೂತ ಹಕ್ಕುಗಳನ್ನು ಖಾತರಿಪಡಿಸುತ್ತದೆ ಎಂದರು.

ಮುಖ್ಯ ಭಾಷಣಕಾರ ಹಾಸನ ಎಂ.ಕೃಷ್ಣ ಕಾನೂನು ಕಾಲೇಜಿನ ಪ್ರಾಧ್ಯಾಪಕ ಡಾ.ಹೇಮಂತ್ ಕುಮಾರ್ ಮಾತನಾಡಿ, ಸಂವಿಧಾನ ದಿನವು ಭಾರತದ ಪ್ರಜಾಪ್ರಭುತ್ವ ಸಂಪ್ರದಾಯದ ಶಾಶ್ವತ ಪರಂಪರೆಯ ಪ್ರಬಲ ಜ್ಞಾಪಕವಾಗಿ ಕಾರ್ಯ ನಿರ್ವಹಿಸುತ್ತದೆ. ಸಂವಿಧಾನದಲ್ಲಿ ಪ್ರತಿಪಾದಿಸಿರುವ ನ್ಯಾಯ, ಸ್ವಾತಂತ್ರ್ಯ, ಸಮಾನತೆ ಮತ್ತು ಭ್ರಾತೃತ್ವದ ಮೂಲಭೂತ ತತ್ವಗಳನ್ನು ಎತ್ತಿಹಿಡಿಯುವ ರಾಷ್ಟ್ರದ ಬದ್ಧತೆಯನ್ನು ಆಚರಿಸುವ ದಿನವಿದು ಎಂದು ಹೇಳಿದರು.

ಬಿ.ಸಿ.ಶಂಕರಾಚಾರ್ ಅವರು ಮಾತನಾಡಿ, 1949, ನ.26ರಂದು ಇಂತಹ ಪವಿತ್ರ ದಿನದಂದು ನಮಗೆ ಸರ್ವವನ್ನೂ ನೀಡಿದ ಸಂವಿಧಾನ ರಚಿಸಿದ ಮಹನೀಯರನ್ನು ಸ್ಮರಿಸೋಣ ಎಂದು ಸಲಹೆ ನೀಡಿದರು.

ತಾ.ಪಂ ಇ.ಒ ಸುಬ್ರಮಣ್ಯ ಶರ್ಮ, ಬಿ.ಇ.ಒ. ಕೃಷ್ಣೆಗೌಡ, ಪ.ಪಂ ಮುಖ್ಯಾಧಿಕಾರಿ ಮಂಜುನಾಥ್, ವೃತ್ತ ನಿರೀಕ್ಷಕ ಮೋಹನ್ ರೆಡ್ಡಿ, ಟಿ. ಎಸ್.ಡಬ್ಲ್ಯೂ ಕೌಸರ್ ಅಹಮದ್, ಕೃಷಿ ಇಲಾಖೆ ಸಹಾಯಕ ನಿರ್ದೇಶಕ ರಮೇಶ್ ಕುಮಾರ್, ರಮೇಶ್, ರವಿಕುಮಾರ್, ಶಾಂತಕೃಷ್ಣ, ಲೋಕೇಶ್ ಕಣಗಾಲ್, ಯೋಗೇಶ್, ಕಬೀರ್ ಅಹಮದ್, ಗೇಕರವಳ್ಳಿ ಬಸವರಾಜು, ದೇವರಾಜು ಉಪಸ್ಥಿತರಿದ್ದರು.

## ಸಾಹಿತಿ ಸಂತೋಷ್‌ಕುಮಾರ್ ಮೆಹಂದಳೆ ವಿಷಾದ | ಎಂ.ಸಿ.ಎಫ್.ನಲ್ಲಿ ಕನ್ನಡ ರಾಜ್ಯೋತ್ಸವದ ಕಲರವ

# ಪತ್ರಿಕೆ, ಪುಸ್ತಕಗಳಿಂದ ದೂರವಾಗುತ್ತಿರುವ ಯುವಜನತೆ

• ಪ್ರಜೋದಯ ವರದಿ



**ಹಾಸನ:** ಇಂದಿನ ಯುವ ಜನತೆ ಮನೋರಂಜನೆಗಾಗಿ ಸಾಕಷ್ಟು ಹಣ ವೆಚ್ಚ ಮಾಡುತ್ತಿದ್ದಾರೆ. ಆದರೆ ಅಲ್ಪ ವೆಚ್ಚ ತಗಲುವ ಪತ್ರಿಕೆ ಮತ್ತು ಪುಸ್ತಕಗಳಿಂದ ದೂರವಾಗುತ್ತಿದ್ದಾರೆ ಎಂದು ಸಾಹಿತಿ ಸಂತೋಷ್‌ಕುಮಾರ್ ಮೆಹಂದಳೆ ವಿಷಾದ ವ್ಯಕ್ತಪಡಿಸಿದರು.

ತಾಲ್ಲೂಕಿನ ಸಾಲಗಾಮೆ ಬಳಿ ಇರುವ ಇಸ್ರೊದ ಮುಖ್ಯ ನಿಯಂತ್ರಣ ಸೌಲಭ್ಯ (ಎಂಸಿಎಫ್) ದಲ್ಲಿ ಆಯೋಜಿಸಲಾಗಿದ್ದ ಕನ್ನಡ ರಾಜ್ಯೋತ್ಸವ ಸಮಾರೋಪ ಸಮಾರಂಭದಲ್ಲಿ ಮಾತನಾಡಿದ ಅವರು, ಪ್ರತಿಯೊಬ್ಬರೂ ಪತ್ರಿಕೆಗಳನ್ನು ಮತ್ತು ಪುಸ್ತಕವನ್ನು ಖರೀದಿಸಿ ಓದುವ ಹವ್ಯಾಸ ಬೆಳೆಸಿಕೊಳ್ಳಬೇಕು. ಇದರಿಂದ ನಮ್ಮ ಸಾಮಾನ್ಯ ಜ್ಞಾನ ಹೆಚ್ಚುವುದರೊಂದಿಗೆ ಭಾಷೆಯ ಬೆಳವಣಿಗೆಗೂ ಪ್ರಾಮುಖ್ಯತೆ ಕೊಡುವಂತಾಗುತ್ತದೆ ಎಂದು ಸಲಹೆ ನೀಡಿದರು.

ಕನ್ನಡ ಭಾಷೆ ಇಂದು ಸಮೃದ್ಧವಾಗಲು ಕಾರಣ ನಮ್ಮ ರಾಜಮನೆತನಗಳು. ಕರ್ನಾಟಕದಲ್ಲಿ ಹಲವಾರು ರಾಜಮನೆತನಗಳು ಆಳ್ವಿಕೆ ನಡೆಸಿವೆ. ಅವುಗಳಲ್ಲಿ ಗಂಗರು, ಕದಂಬರು, ಚಾಲುಕ್ಯರು, ಹೊಯ್ಸಳರು, ರಾಷ್ಟ್ರಕೂಟರು ಇಂತಹ ಪ್ರಸಿದ್ಧ ರಾಜಮನೆತನಗಳು ಆಳಿದ ನಾಡು ನಮ್ಮದು ಎಂದು ಹೇಳಲು ಹೆಮ್ಮೆಯಾಗುತ್ತದೆ. ನಮ್ಮ ನಾಡಿನ ಕಲೆ, ಸಾಹಿತ್ಯ ಹಾಗೂ ಸಾಂಸ್ಕೃತಿಕ ವೈಭವವನ್ನು ಶ್ರೀಮಂತಗೊಳಿಸಿ, ಪ್ರಪಂಚದ ಮೂಲೆ ಮೂಲೆಯಲ್ಲಿ ಗುರುತಿಸಲು ಇವರ ಕೊಡುಗೆ ಅಪಾರವಾದದ್ದು ಎಂದರು.

ಯಾವುದೇ ರಾಜ್ಯವಾಗಲಿ ಆ ರಾಜ್ಯವು ತನ್ನದೇ ಆದ ಪ್ರಾಂತೀಯ ಭಾಷೆಯನ್ನು ಹೊಂದಿರುತ್ತದೆ. ಭಾಷೆಯಿಂದ ಮಾತ್ರ ರಾಜ್ಯವು ಇಂದು ಶ್ರೇಷ್ಠತೆಯನ್ನು ಹೊಂದಲು ಸಾಧ್ಯ. ಇಂತಹ ಕನ್ನಡ ರಾಜ್ಯೋತ್ಸವವನ್ನು ಆಚರಣೆ ಮಾಡಬೇಕಾದರೆ ನಾವು ಮೊದಲು ನಮ್ಮ ಭಾಷೆಯ ಬಗ್ಗೆ ಅಭಿಮಾನ ಹೊಂದಿರಬೇಕು ಎಂದು ಹೇಳಿದರು.

ಸಂಸ್ಥೆಯ ನಿರ್ದೇಶಕ ಪಂಕಜ್ ದಾಮೋದರ್ ಕಿಲ್ಲೇದಾರ್ ಅವರು, ಕರ್ನಾಟಕ ಶಿಲ್ಪಕಲೆಗಳ ಬೀಡು ಹಾಗೂ ಸಂಪದ್ಭರಿತವಾದ ನಾಡು. ಹೊರರಾಜ್ಯದಿಂದ ಬಂದಂತಹ ನಾವು ಇಂತಹ ನಾಡಿನಲ್ಲಿ ಕಾರ್ಯ ನಿರ್ವಹಿಸುತ್ತಿರುವುದು ನಮ್ಮ ಸೌಭಾಗ್ಯ. ಪ್ರತಿವರ್ಷವೂ ಈ ಕನ್ನಡ ರಾಜ್ಯೋತ್ಸವವನ್ನು ವಿಜೃಂಭಣೆಯಿಂದ ಆಚರಿಸಬೇಕು. ಇದಕ್ಕೆ ನಮ್ಮ ಸಹಕಾರ ಸದಾ ಇರುತ್ತದೆ ಎಂದು ತಿಳಿಸಿದರು.

ಅನ್ಯರಾಜ್ಯಗಳಿಂದ ಬಂದಂತಂಹ ಅನೇಕ ಅಧಿಕಾರಿಗಳು, ಕನ್ನಡಿಗರು ಹಾಗೂ ಕನ್ನಡ ನಾಡು ನುಡಿಯ ಕುರಿತು ಹಿತನುಡಿಗಳನ್ನು ಆಡುವುದರ ಮೂಲಕ ಕನ್ನಡಾಭಿಮಾನವನ್ನು ಪ್ರದರ್ಶಿಸಿದರು.

ಸಂತೋಷ್ ಕುಮಾರ್ ಮೆಹಂದಳೆ ಅವರನ್ನು ಎಂಸಿಎಫ್ ವತಿಯಿಂದ ಸನ್ಮಾನಿಸಲಾಯಿತು. ಎಂಸಿಎಫ್ ಉಪ ನಿರ್ದೇಶಕರಾದ ಕೆ.ಕಿರಣ್ ಮತ್ತು ಹೆಚ್.ವಿ.ಲೋಕೇಶ್, ಸಮೂಹ ನಿರ್ದೇಶಕರಾದ ಡಿ.ಈ. ಬಾಲಾಜಿ, ಕುಮಾರಸ್ವಾಮಿ, ಮುಡುಂಬಾ ರಮೇಶ್ ಮತ್ತು ರಾಘವೇಂದ್ರ, ಜಾಂತಿಕರ್, ಆಡಳಿತಾಧಿಕಾರಿ ಲಲಿತ ಈಶ್ವರ್ ಪ್ರಸಾದ್, ಎಂಸಿಎಫ್ ಕನ್ನಡ ರಾಜ್ಯೋತ್ಸವ ಸಮಿತಿ ಅಧ್ಯಕ್ಷ ಡಿ. ಶ್ರೀನಿವಾಸ ಮೂರ್ತಿ ಮತ್ತು ಸಿಐಎಸ್‌ಎಫ್ ಉಪ ಕಮಾಂಡೆಂಟ್ ಆಶಿಷ್ ಗಲ್ಯಾನ್ ಉಪಸ್ಥಿತರಿದ್ದರು.

'ಹೊನ್ನಾವರದ ಕರಿಮೆಣಸಿನ ರಾಣಿ ಚೆನ್ನಭೈರಾದೇವಿ' ಕಿರುನಾಟಕ ಸುಧಾ ಮತ್ತು ದಿವ್ಯಶ್ರೀ ನೇತೃತ್ವದಲ್ಲಿ ಉತ್ತಮವಾಗಿ ಮೂಡಿಬಂದಿತು. ಮಯೂರವರ್ಮ ನಾಟಕದಲ್ಲಿ ಶಿವರಾಜ್ ತಂಡದಿಂದ ಹಾಗೂ ಬಬ್ರುವಾಹನ ನಾಟಕ ಚಂದ್ರಶೇಖರ್ ಎಸ್.ಕೆ. ಹಾಗೂ ಅರ್ಜುನನ ಪಾತ್ರವನ್ನು ಮಂಜೇಗೌಡರು ಉತ್ತಮವಾಗಿ ಅಭಿನಯಿಸಿದರು. ಶ್ರೀಧರ ಕುಲಕರ್ಣಿ ಅವರ ನೇತೃತ್ವದಲ್ಲಿ ಪ್ರಹ್ಲಾದ್ ಮತ್ತು ಮಾನಸ ವೃಂದದವರಿಂದ ಸಮೂಹ ನೃತ್ಯ ಪ್ರದರ್ಶನ ನಡೆಯಿತು. ಶಿವಕುಮಾರ್ ಮತ್ತು ತಂಡ ಜಾನಪದ ಹಾಡುಗಳನ್ನು ಹಾಡಿದರು.

## ಡಿ.1ಕ್ಕೆ ಆಲೂರಿನಲ್ಲಿ ತಾಲ್ಲೂಕು ಮಟ್ಟದ ಮಹಿಳಾ ವಿಚಾರಗೋಷ್ಠಿ

• ಪ್ರಜೋದಯ ವರದಿ

**ಆಲೂರು:** ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ. ಟ್ರಸ್ಟ್ (ರಿ.) ಆಲೂರು ರವರ ವತಿಯಿಂದ, ಡಿ. 1 ರಂದು ಬೆಳಿಗ್ಗೆ 11 ಕ್ಕೆ ಪಟ್ಟಣದ ವೆಂಕಟೇಶ್ವರ ಕಲ್ಯಾಣ ಮಂಟಪದಲ್ಲಿ ತಾಲ್ಲೂಕು ಮಟ್ಟದ ಮಹಿಳಾ ವಿಚಾರಗೋಷ್ಠಿ ಕಾರ್ಯಕ್ರಮ ನಡೆಯಲಿದೆ.

ಶಾಸಕ ಸಿಮೆಂಟ್ ಮಂಜು ಕಾರ್ಯಕ್ರಮ ಉದ್ಘಾಟನೆ ಮಾಡಲಿದ್ದಾರೆ. ಪತ್ರಕರ್ತ ಎಂ.ಪಿ. ಹರೀಶ್, ಸುರೇಶ್ ಮೊಯ್ಲಿ, ಡಾ.ಮಮತ, ಡಾ. ನಿಸಾರ್ ಫಾತಿಮ, ಹೆಚ್.ಧರ್ಮರಾಜ್, ಯು. ಜೆ. ಮಲ್ಲಿಕಾರ್ಜುನ, ಎಸ್. ಮೋಹನ್‌ಕುಮಾರ್, ಎಂ. ಬಾಲಕೃಷ್ಣ ಶೆಟ್ಟಿ, ಎಂ.ಕೆ.ರಾಜಶೇಖರ್ ಅವರು ಉಪಸ್ಥಿತರಿರುವರು.

ಇದೆ ಸಂದರ್ಭದಲ್ಲಿ ಮಹಿಳೆಯರಿಗೆ ರಂಗೋಲಿ ಸ್ಪರ್ಧೆ, ಪುಷ್ಪಗುಚ್ಛ ತಯಾರಿ, ಕರಕುಶಲ ಪ್ರದರ್ಶನ ಏರ್ಪಡಿಸಲಾಗಿದೆ. ನಂತರ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಲಿದೆ.

## ಸ್ಕಾಲರ್ಸ್ ಶಾಲೆಯಲ್ಲಿ ಸಂವಿಧಾನ ದಿನಾಚರಣೆ



• ಪ್ರಜೋದಯ ವರದಿ

**ಹಾಸನ:** ನಗರದ ದ ಸ್ಕಾಲರ್ಸ್ ವರ್ಲ್ಡ್ ಮತ್ತು ಸ್ಕಾಲರ್ಸ್ ಶಾಲೆಯಲ್ಲಿ ಬುಧವಾರ ಸಂವಿಧಾನ ದಿನವನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.

ಶಾಲೆಯ ಆಡಳಿತಾಧಿಕಾರಿ ಡಾ. ಎಚ್.ಎನ್.ಚಂದ್ರಶೇಖರ್ ಅವರು ಮಾತನಾಡಿ, ವಿಶ್ವದ ಶ್ರೇಷ್ಠ ಸಂವಿಧಾನ ಎನಿಸಿಕೊಂಡಿರುವ ಭಾರತ ಸಂವಿಧಾನವು ಪ್ರತಿಯೊಬ್ಬರಿಗೂ ಸಮಾನ ಹಕ್ಕುಗಳನ್ನು ಕಲ್ಪಿಸಿದೆ. ಬಡವ- ಶ್ರೀಮಂತ, ಮೇಲು-ಕೀಳು, ಮಹಿಳಾ ಅಸಮಾನತೆಯನ್ನು ತೊಡೆದು ಹಾಕಿದ ಸಂವಿಧಾನವನ್ನು ಗೌರವಿಸುವುದು ಪ್ರತಿಯೊಬ್ಬರ ಕರ್ತವ್ಯ. ಅಂಬೇಡ್ಕರ್ ಅವರ ಪರಿಶ್ರಮದ ಫಲವಾಗಿ ದೇಶದ ಪ್ರತಿಯೊಬ್ಬರು ಸ್ವಾತಂತ್ರ್ಯವನ್ನು ಅನುಭವಿಸುವಂತಾಗಿದೆ ಎಂದು ಅವರು ಹೇಳಿದರು.

ಶಾಲೆಯ ವಿದ್ಯಾರ್ಥಿನಿ ಭಾರತೀಯ ಸಂವಿಧಾನದಲ್ಲಿ ಅಳವಡಿಸಲಾಗಿರುವ ಮೌಲ್ಯಗಳು, ಆದರ್ಶಗಳನ್ನು ಒತ್ತಿ ಹೇಳುತ್ತಾ ಈ ದಿನದ ಮಹತ್ವದ ಬಗ್ಗೆ ಸೊಗಸಾಗಿ ಮಾತನಾಡಿದರು. ನಂತರ ಶಿಕ್ಷಕರು ಮತ್ತು ವಿದ್ಯಾರ್ಥಿಗಳು ಸಂವಿಧಾನ ದಿನಾಚರಣೆಯ ಪ್ರಮಾಣ ವಚನ ಸ್ವೀಕರಿಸಿ ನ್ಯಾಯ, ಸ್ವಾತಂತ್ರ್ಯ, ಸಮಾನತೆ ಮತ್ತು ಭ್ರಾತೃತ್ವಕ್ಕೆ ತಮ್ಮ ಬದ್ಧತೆಯನ್ನು ಪುನರುಚ್ಚರಿಸಿದರು. ಸಂವಿಧಾನದ ಮನೋಭಾವವನ್ನು ಎತ್ತಿ ಹಿಡಿಯುವ ಜವಾಬ್ದಾರಿಯುತ ಮತ್ತು ಜ್ಞಾನವಂತ ನಾಗರಿಕರಾಗಲು ಕಾರ್ಯಕ್ರಮವು ವಿದ್ಯಾರ್ಥಿಗಳಿಗೆ ಪ್ರೇರಣೆ ನೀಡಿತು.

ಶಾಲೆಯಕಾರ್ಯದರ್ಶಿ ಮಮತಾ ಚಂದ್ರಶೇಖರ್, ಬೋಧಕ ಹಾಗು ಬೋಧಕೇತರ ಸಿಬ್ಬಂದಿ ಇದ್ದರು.

